ಸಂಪುಟ : 11 ಸಂಚಿಕೆ: 70 ಪುಟ : 4+2 ಬೆಲೆ: 3.00 ಗುರುವಾರ ಎಪ್ರಿಲ್ 16 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 70 Pages : 4+2 Price : 3.00 Thursday April 16 2026 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವಿ ಬಾಗೇವಾಡಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ದಿ. 16-04-2026 ರಂದು ಮುಂಜಾನೆ 11:30 ಗಂಟೆಯಿಂದ ಸಾಯಂಕಾಲ 4:00 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

10 ಎಂವಿಎ ಸಾಮರ್ಥ್ಯದ 110/11 ಕೆವಿ ಪರಿವರ್ತಕದ ಮೇಲೆ ತುರ್ತು ನಿರ್ವಹಣಾ ಕಾರ್ಯ ನಡೆಯುತ್ತಿರುವುದರಿಂದ, ಇದರಡಿ ಬರುವ ಎಲ್ಲಾ 11 ಕೆವಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ನಿಲುಗಡೆ ಆಗಲಿದೆ. ಈ ಅವಧಿಯಲ್ಲಿ ಸಾರ್ವಜನಿಕರು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ವಿದ್ಯುತ್ ಇಲಾಖೆ ಮನವಿ ಮಾಡಿದೆ.

“ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಸನ್-2

## ಸ್ವಿಂಗ್ ಎನ್ ಮಿಸ್ ವಿರುದ್ಧ ಡಾಮಿನೇಟರ್ಸ್‌ಗೆ 9 ರನ್ ಜಯ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ನಡೆಯುತ್ತಿರುವ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಸನ್-2ರ ನಾಲ್ಕನೇ ಪಂದ್ಯದಲ್ಲಿ ಡಾಮಿನೇಟರ್ಸ್ ತಂಡವು ಸ್ವಿಂಗ್ ಎನ್ ಮಿಸ್ ವಿರುದ್ಧ 9 ರನ್‌ಗಳ ಗೆಲುವು ದಾಖಲಿಸಿದೆ.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಡಾಮಿನೇಟರ್ಸ್ ತಂಡ ನಿಗದಿತ 10 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 80 ರನ್ ಗಳಿಸಿತು. ರವಿ 26 ರನ್ (25 ಎಸೆತಗಳಲ್ಲಿ 3 ಫೋರ್) ಗಳಿಸಿ ತಂಡಕ್ಕೆ ಉತ್ತಮ ಆರಂಭ ನೀಡಿದರು. ಗೋಪಿ 23 ರನ್ ಮತ್ತು ಮಲ್ಲು 16 ರನ್ ಗಳಿಸಿದರು. ಸ್ವಿಂಗ್ ಎನ್ ಮಿಸ್ ಪರ ಮಂಜುನಾಥ ರವಿ, ಇಬ್ರಾಹಿಂ, ಕಾರ್ತಿಕ ಹುಣಸೂರ ಮತ್ತು ಅಸ್ಲಾಮ್ ಮುಧೋಳ ತಲಾ ಒಂದು ವಿಕೆಟ್ ಪಡೆದರು.

ಗುರಿ ಬೆನ್ನಟ್ಟಿದ ಸ್ವಿಂಗ್ ಎನ್ ಮಿಸ್ ತಂಡ 10 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 71 ರನ್ ಗಳಿಸಿ ಸೋಲು ಕಂಡಿತು. ಶಬ್ಬೀರ ಅಹ್ಮದ್ 15 ರನ್, ಇಬ್ರಾಹಿಂ ಎಂ 15 ರನ್ ಹಾಗೂ ಮಹೇಶ 16 ರನ್ ಗಳಿಸಿದರು.

ಡಾಮಿನೇಟರ್ಸ್ ಪರ ಪ್ರಜ್ವಲ್ 2 ವಿಕೆಟ್ ಪಡೆದು ಉತ್ತಮ ಬೌಲಿಂಗ್ ಪ್ರದರ್ಶನ ನೀಡಿದರು. ಸರ್ಫರಾಜ್ ಕೌತಾಳ, ಲಕ್ಷ್ಮಣ ಮತ್ತು ಸೋಮು ತಲಾ ಒಂದು ವಿಕೆಟ್ ಪಡೆದರು.

ಪಂದ್ಯಶ್ರೇಷ್ಠ ಹಾಗೂ ಉತ್ತಮ ಬ್ಯಾಟರ್ ಪ್ರಶಸ್ತಿ ರವಿ ಅವರಿಗೆ ಲಭಿಸಿದರೆ, ಉತ್ತಮ ಬೌಲರ್ ಪ್ರಶಸ್ತಿಗೆ ಪ್ರಜ್ವಲ್ ಪಾತ್ರರಾದರು.

## ನೇಮಕಾತಿ ಹೋರಾಟಗಾರ ವಿದ್ಯಾರ್ಥಿಗಳ ಬಂಧನ ಖಂಡನೀಯ: ಎಸ್.ವಿ. ಸಂಕನೂರ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ನೇಮಕಾತಿಗಾಗಿ ಒತ್ತಾಯಿಸಿ ಧರಣಿ ನಡೆಸಲು ಮುಂದಾದ ವಿದ್ಯಾರ್ಥಿಗಳನ್ನು ಬಂಧಿಸಿರುವುದು ಖಂಡನೀಯ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವಂತೆ ಆಗ್ರಹಿಸಿ ನಡೆದ ಹೋರಾಟದ ಸಂದರ್ಭದಲ್ಲಿ ಮುಖ್ಯಮಂತ್ರಿ ಅವರು ಒಂದು ತಿಂಗಳೊಳಗೆ ▸▸4ನೇ ಪುಟಕ್ಕೆ

ಗದಗದಲ್ಲಿ ‘ಮನೆಗೊಂದು ಗ್ರಂಥಾಲಯ’ ಅಭಿಯಾನಕ್ಕೆ ಡಾ. ಮಾನಸ ಚಾಲನೆ

# ಮನೆಗೆ ದೀಪ, ಮನಕ್ಕೆ ಜ್ಞಾನವೇ ಬೆಳಕು

■ವಿಜಯಸಾಕ್ಷಿ ಸುದ್ದಿ, ಗದಗ

ಜ್ಞಾನವೇ ಸಮಾಜದ ಪ್ರಗತಿಯ ಮೂಲವಾಗಿದ್ದು, ಮನೆಮನೆಗೂ ಅರಿವಿನ ಬೆಳಕು ತಲುಪಿಸುವ ಉದ್ದೇಶದಿಂದ “ಮನೆಗೊಂದು ಗ್ರಂಥಾಲಯ” ಯೋಜನೆ ಜಾರಿಗೊಳ್ಳುತ್ತಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ ಹೇಳಿದರು.

ಕನ್ನಡ ಪುಸ್ತಕ ಪ್ರಾಧಿಕಾರ ಬೆಂಗಳೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಹಾಗೂ “ಮನೆಗೊಂದು ಗ್ರಂಥಾಲಯ” ಜಿಲ್ಲಾ ಜಾಗೃತಿ ಸಮಿತಿ ಸಹಯೋಗದಲ್ಲಿ ಕರ್ನಾಟಕ ರಾಜ್ಯ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರು ಹಾಗೂ ಗದಗ ಜಿಲ್ಲಾ ಅಧ್ಯಕ್ಷರಾದ ಡಾ. ಬಸವರಾಜ ವಿ. ಬಳ್ಳಾರಿ ಅವರ ಗದಗ ನಗರದ ಅಭಿನವ ನಗರದಲ್ಲಿನ ನಿವಾಸದಲ್ಲಿ ಬುಧವಾರ ಅಭಿಯಾನ




ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಇದು ಮೂರನೇ ಕಾರ್ಯಕ್ರಮವಾಗಿದ್ದು, ಮೂರನೇ ಗ್ರಂಥಾಲಯ ಸ್ಥಾಪನೆಯಾಗಿರುವುದು ಸಂತಸದ ಸಂಗತಿ. ಬುದ್ಧ, ಬಸವ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ತತ್ವ-ಸಿದ್ಧಾಂತಗಳು ನಮ್ಮೆಲ್ಲರಿಗೂ ದಾರಿದೀಪವಾಗಬೇಕು ಎಂದು ಅಭಿಪ್ರಾಯಪಟ್ಟರು.

ಡಾ. ಅಂಬೇಡ್ಕರ್ ಅವರು ನೀಡಿದ ಸಂದೇಶವನ್ನು ಉಲ್ಲೇಖಿಸಿದ ಅವರು, “ಎರಡು ರೂಪಾಯಿ ಗಳಿಸಿದರೆ, ಒಂದು ಬದುಕಿಗೆ, ಮತ್ತೊಂದು ಪುಸ್ತಕ ಖರೀದಿಗೆ ಬಳಸಬೇಕು” ಎಂಬ ಮಾತು ಜ್ಞಾನ ಸಂಪಾದನೆಯ ಅಗತ್ಯತೆಯನ್ನು ಸಾರುತ್ತದೆ. ಇದು ಸಮಾಜದಲ್ಲಿ ಪಾಲನೆಯಾಗಬೇಕು ಎಂದರು.

ಬಸವಣ್ಣನವರ ವೈಜ್ಞಾನಿಕ ಚಿಂತನೆ ಕುರಿತು ಮಾತನಾಡಿದ ಅವರು, ಭಕ್ತಿ ಹಾಗೂ ಅರಿವಿನ ನಡುವಿನ ಸಂಬಂಧವನ್ನು ವೈಜ್ಞಾನಿಕವಾಗಿ ವಿವರಿಸಿದ ಬಸವಣ್ಣನವರು ಅಜ್ಞಾನ ಹಾಗೂ ಭಯದ ಭಕ್ತಿ ಬೇಡವೆಂದು ಹೇಳಿದ್ದಾರೆ. ಲಿಂಗದ ಮೂಲಕ ದೇವರು ನಮ್ಮೊಳಗೇ ಇದ್ದಾನೆ ಎಂಬ ಅರಿವನ್ನು ಮೂಡಿಸಿ, ವಚನಗಳ ಮೂಲಕ ಜ್ಞಾನ ಸಂಗ್ರಹಿಸಿಕೊಳ್ಳಲು ಪ್ರೇರೇಪಿಸಿದರು ಎಂದು ತಿಳಿಸಿದರು.

“ಮನೆಗೊಂದು ಗ್ರಂಥಾಲಯ” ಯೋಜನೆಯ ಪ್ರಮುಖ ಉದ್ದೇಶವೆಂದರೆ ಜ್ಞಾನದ ಬೆಳಕು ಮನೆಮನೆಗೆ ತಲುಪಿಸುವುದು, ಅರಿವಿನ ಅಂಗಳವನ್ನು ವಿಸ್ತರಿಸುವುದು ಹಾಗೂ ಅಜ್ಞಾನದ ಅಡ್ಡಗೋಡೆಗಳನ್ನು ಒಡೆಯುವುದು. “ಮನೆ ಬೆಳಗಬೇಕಾದರೆ ದೀಪ ಹಚ್ಚಬೇಕು, ಮನ ಬೆಳಗಬೇಕಾದರೆ ಜ್ಞಾನ ಜ್ಯೋತಿ ಹಚ್ಚಬೇಕು” ಎಂದು ಹೇಳಿದರು. ▸▸4ನೇ ಪುಟಕ್ಕೆ

> “ಪ್ರತಿ ಮನೆಯಲ್ಲೂ ಸಣ್ಣ ಗ್ರಂಥಾಲಯ ಇದ್ದರೆ ಜ್ಞಾನದ ದೀಪ ಬೆಳಗುತ್ತದೆ, ಓದು ಹವ್ಯಾಸ ಸಮಾಜದ ಪ್ರಗತಿಗೂ ಪೂರಕ.”
> – **ವಿವೇಕಾನಂದ ಗೌಡ ಪಾಟೀಲ,** ಅಧ್ಯಕ್ಷರು, ಕಸಾಪ ಗದಗ.

> “ಬಸವರಾಜ ಬಳ್ಳಾರಿಯವರ ಮನೆಯಲ್ಲಿ ಗ್ರಂಥಾಲಯ ಸ್ಥಾಪನೆ ಚೈತನ್ಯಕಾರಿ; ಇದು ಅತಿಥಿಗಳು ಮತ್ತು ನೆರೆಹೊರೆಯವರಲ್ಲಿ ಓದು ಹವ್ಯಾಸ ಬೆಳೆಸಲು ಸಹಕಾರಿ.”
> – **ಡಾ. ಶಿವಪ್ಪ ಕುರಿ,** ಮಾಜಿ ಅಧ್ಯಕ್ಷ, ಕಸಾಪ.

ಮಾಲವಿ ಡ್ಯಾಂ ಕಾಮಗಾರಿ ವಿಳಂಬಕ್ಕೆ ರೈತ ಸಂಘ ಆಕ್ರೋಶ- 4 ಕೋಟಿ ಮಂಜೂರಾದರೂ ಕ್ರಸ್ಟ್ ಗೇಟ್ ಅಳವಡಿಕೆ ಅಪೂರ್ಣ

# “ಕಾಮಗಾರಿ ತಕ್ಷಣ ಪೂರ್ಣಗೊಳಿಸದಿದ್ದರೆ ಉಗ್ರ ಹೋರಾಟ ಅನಿವಾರ್ಯ”

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಹಗರಿಬೊಮ್ಮನಹಳ್ಳಿ ತಾಲೂಕಿನ ಜೀವನಾಡಿಯಾದ ಮಾಲವಿ ಡ್ಯಾಂನಲ್ಲಿ ಕ್ರಸ್ಟ್ ಗೇಟ್ ಅಳವಡಿಕೆ ಹಾಗೂ ದುರಸ್ತಿ ಕಾಮಗಾರಿಗೆ 4 ಕೋಟಿ ಮಂಜೂರಾದರೂ ಗುತ್ತಿಗೆದಾರರು ಕಾಮಗಾರಿ ಅರ್ಧದಲ್ಲೇ ನಿಲ್ಲಿಸಿ ನಾಪತ್ತೆಯಾಗಿರುವುದರಿಂದ ರೈತ ಸಂಘದ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ಕಾರ್ಯಾಧ್ಯಕ್ಷ ಜೆ.ಎಂ. ವೀರಸಂಗಯ್ಯ ಅವರು ರೈತ ಸಂಘದ ನಿಯೋಗದೊಂದಿಗೆ ಬುಧವಾರ ಮಾಲವಿ ಡ್ಯಾಂಗೆ ಭೇಟಿ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದರು. ಕಳೆದ ವರ್ಷದಂತೆಯೇ ಈ ವರ್ಷವೂ ಎರಡು ಕ್ರಸ್ಟ್ ಗೇಟ್‌ಗಳ ಅಳವಡಿಕೆ ಆಗದೇ ಇರುವುದರಿಂದ ಮಳೆಗಾಲದಲ್ಲಿ ಡ್ಯಾಂ ನೀರು




ಪೋಲಾಗುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

ಮಾಲವಿ ಜಲಾಶಯದಲ್ಲಿ ಒಟ್ಟು 10 ಗೇಟ್‌ಗಳಿದ್ದು, ಅದರಲ್ಲಿ 8 ಕ್ರಸ್ಟ್ ಗೇಟ್‌ಗಳ ದುರಸ್ತಿ ಕಾಮಗಾರಿ ಪೂರ್ಣಗೊಂಡಿದೆ. ಉಳಿದ 2 ಗೇಟ್‌ಗಳ ಅಳವಡಿಕೆ ಕೆಲಸ ಕಳೆದ ಎರಡು ತಿಂಗಳಿಂದ ಸ್ಥಗಿತಗೊಂಡಿದೆ. ಈ ಕಾಮಗಾರಿಗೆ ಸಂಬಂಧಿಸಿದಂತೆ ಶಾಸಕ ಕೆ. ನೇಮಿರಾಜ ನಾಯ್ಕ, ಉಸ್ತುವಾರಿ ಸಚಿವರು, ಸಂಸದರು ಹಾಗೂ ಜಲ ಸಂಪನ್ಮೂಲ ಇಲಾಖೆ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿದರು.

ಹಗರಿಬೊಮ್ಮನಹಳ್ಳಿ ತಾಲೂಕು ಮಳೆ ಆಧಾರಿತ ಪ್ರದೇಶವಾಗಿದ್ದು, ಮಾಲವಿ ಡ್ಯಾಂ ಕುಡಿಯುವ ನೀರು ಹಾಗೂ ಭೂಗರ್ಭ ಜಲಮಟ್ಟ ಹೆಚ್ಚಿಸಲು ಪ್ರಮುಖ ಮೂಲವಾಗಿದೆ. ತುಂಗಭದ್ರ ಡ್ಯಾಂ ಹಿನ್ನೀರಿನಿಂದ 2 ಟಿಎಂಸಿ ನೀರನ್ನು ತರಲು ಸರ್ಕಾರ 150ರಿಂದ 200 ಕೋಟಿ ವೆಚ್ಚ ಮಾಡಿದೆ. ಆದರೆ ಈಗ ಕ್ರಸ್ಟ್ ಗೇಟ್ ಕಾಮಗಾರಿ ವಿಳಂಬವಾಗಿರುವುದು ದುರದೃಷ್ಟಕರ ಎಂದರು.

ಇನ್ನೂ ಕೆಲವೇ ದಿನಗಳಲ್ಲಿ ಮುಂಗಾರು ಮಳೆಗಾಲ ಆರಂಭವಾಗಲಿದ್ದು, ತಕ್ಷಣವೇ ಬಾಕಿ ಇರುವ ಎರಡು ಕ್ರಸ್ಟ್ ಗೇಟ್‌ಗಳನ್ನು ಅಳವಡಿಸಿ ಡ್ಯಾಂನಲ್ಲಿ ನೀರು ಸಂಗ್ರಹವಾಗುವಂತೆ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಕಳೆದ ವರ್ಷದಂತೆ ನೀರು ಪೋಲಾಗುವ ಸ್ಥಿತಿ ಉಂಟಾಗುತ್ತದೆ ಎಂದು ಎಚ್ಚರಿಸಿದರು.

ಎಪ್ರಿಲ್ 26ರೊಳಗೆ ಕಾಮಗಾರಿ ಪ್ರಾರಂಭವಾಗದಿದ್ದರೆ ಎಪ್ರಿಲ್ 27ರಂದು ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಶಾಸಕ ಕೆ. ನೇಮಿರಾಜ ನಾಯ್ಕ, ಸಚಿವರಾದ ಜಮೀರ್ ಅಹ್ಮದ್ ಖಾನ್, ಈ. ತುಕಾರಾಂ ಹಾಗೂ ಜಲ ಸಂಪನ್ಮೂಲ ಇಲಾಖೆ ಅಧಿಕಾರಿಗಳ ವಿರುದ್ಧ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಿರಿಯ ಸಾಹಿತಿಗಳಾದ ಹುರಕಡ್ಲಿ ಶಿವಕುಮಾರ್ ಬಾಚಿಗೊಂಡನಹಳ್ಳಿ, ಈಕೆ ಕೃಷ್ಣಮೂರ್ತಿ, ಪಿ.ಎಲ್.ಡಿ ಬ್ಯಾಂಕಿನ ನಿವೃತ್ತ ಕುಮಾರ್, ರೈತ ಸಂಘದ ಹಿರಿಯರಾದ ತಂಬ್ರಹಳ್ಳಿ ರವಿಕುಮಾರ್, ವಿಜಯ್ ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಬಿಜೆಪಿ ಮಹಿಳಾ ಮೋರ್ಚಾದಿಂದ ‘ನಾರಿ ಶಕ್ತಿ’ ಜಾಗೃತಿ ಬೈಕ್ ರ‍್ಯಾಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ‘ವಿಕಸಿತ ಭಾರತ’ ಸಂಕಲ್ಪದ ಮಹತ್ವದ ಮೈಲಿಗಲ್ಲಾದ ಶೇ. 33% ಮಹಿಳಾ ಮೀಸಲಾತಿ ಕಾಯ್ದೆ (ನಾರಿ ಶಕ್ತಿ ವಂದನಾ ಅಧಿನಿಯಮ 2026) ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಗದಗ ನಗರದಲ್ಲಿ ಬೃಹತ್ ಬೈಕ್ ರ‍್ಯಾಲಿ ನಡೆಯಿತು.

ಈ ರ‍್ಯಾಲಿಗೆ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಂ.ಎಸ್. ಕರಿಗೌಡ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಸೇರಿದಂತೆ ಹಲವರು ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ನಿರ್ಮಲಾ ಕೊಳ್ಳಿ, ನಗರ ಮಹಿಳಾ ಮೋರ್ಚಾ ಅಧ್ಯಕ್ಷೆ ಸ್ವಾತಿ ಅಕ್ಕಿ, ಉಷಾ ದಾಸರ, ವಿಜಯಲಕ್ಷ್ಮಿ ದಿಂಡೂರ, ವಿದ್ಯಾವತಿ ಗಡಗಿ, ಜಯಶ್ರೀ ಉಗಲಾಟದ, ಶಾರದಾ ಸಜ್ಜನರ, ಪಾರ್ವತಿ ಪಟ್ಟಣಶೆಟ್ಟಿ, ಅಕ್ಕಮ್ಮ ವಸ್ತ್ರದ, ಪುಷ್ಪಾ ಪೂಜಾರ, ರೇಖಾ ಗೌಳಿ, ಪ್ರೀತಿ ಶಿವಪ್ಪನಮಠ, ರೇಖಾ ಬಂಗಾರಶೆಟ್ಟರ, ಯೋಗೇಶ್ವರಿ ಬಾವಿಕಟ್ಟಿ, ಶಿವಲೀಲಾ ಉಮುಚಗಿ, ಮಾಧುರಿ ಮಾಳೆಕೊಪ್ಪ, ವಿಜಯಲಕ್ಷ್ಮಿ ಮಾನ್ವಿ, ಪವಿತ್ರಾ ಮುದುಗಲ್, ನೇತ್ರ ಜೋಗಿನ್, ಶ್ರೀದೇವಿ ಲಕ್ಕಾಪುರ, ಸುನಿತಾ ಹಳ್ಳಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಇದರ ಜೊತೆಗೆ ಅನಿಲ ಅಬ್ಬಿಗೇರಿ, ಸುಧೀರ ಕಾಟಿಗರ, ನಾಗರಾಜ ತಳವಾರ, ಶಂಕರ ಮಲ್ಲಸಮುದ್ರ, ರಮೇಶ್ ಸಜ್ಜಗಾರ, ದೇವೇಂದ್ರಪ್ಪ ಹೂಗಾರ, ರವಿ ಮಾನ್ವಿ, ವಿನೋದ ಹಂಸನೂರ ಸೇರಿದಂತೆ ಹಲವು ಪ್ರಮುಖರು ಉಪಸ್ಥಿತರಿದ್ದರು.

“ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಸನ್-2

## ದಂಬಾಂಗ್ ವಿರುದ್ಧ ಫ್ಲೈಯಿಂಗ್ ಪಾಲ್ಕನ್ಸ್‌ಗೆ 16 ರನ್ ಜಯ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ನಡೆಯುತ್ತಿರುವ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಸನ್-2ರ ಎರಡನೇ ಪಂದ್ಯದಲ್ಲಿ ಫ್ಲೈಯಿಂಗ್ ಪಾಲ್ಕನ್ಸ್ ತಂಡ ದಂಬಾಂಗ್ ವಿರುದ್ಧ 16 ರನ್‌ಗಳ ಜಯ ದಾಖಲಿಸಿದೆ.

ಪಂದ್ಯದಲ್ಲಿ 3 ವಿಕೆಟ್ ಪಡೆದು ಉತ್ತಮ ಪ್ರದರ್ಶನ ನೀಡಿದ ಫ್ಲೈಯಿಂಗ್ ಪಾಲ್ಕನ್ಸ್ ತಂಡದ ನಾಯಕ ಶಂಕರ್ ಮ್ಯಾನ್ ಆಫ್ ದಿ ಮ್ಯಾಚ್ ಹಾಗೂ ಬೆಸ್ಟ್ ಬಾಲರ್ ಪ್ರಶಸ್ತಿಗೆ ಭಾಜನರಾದರು. ದಂಬಾಂಗ್ ತಂಡದ ಸುಲೇಮಾನ್ 31 ಎಸೆತಗಳಲ್ಲಿ 36 ರನ್ ಬಾರಿಸಿ ಬೆಸ್ಟ್ ಬ್ಯಾಟರ್ ಆಗಿ ಗಮನ ಸೆಳೆದರು.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಫ್ಲೈಯಿಂಗ್ ಪಾಲ್ಕನ್ಸ್ ತಂಡ ನಿಗದಿತ 10 ಓವರ್‌ಗಳಲ್ಲಿ 89 ರನ್ ಗಳಿಸಿತು. ಗಿರೀಶ್ 26 ರನ್ ಹಾಗೂ ನವೀನಕುಮಾರ 29 ರನ್ ಗಳಿಸಿ ತಂಡಕ್ಕೆ ನೆರವಾದರು. ದಂಬಾಂಗ್ ಪರ ಇಲಾಹಿ ಇಲಿಯಾಸ್, ಮೊಹಮ್ಮದ್ ಅಲಿ, ಕುಮಾರ ಮತ್ತು ರಾಮು ತಲಾ ಒಂದು ವಿಕೆಟ್ ಪಡೆದರು.




ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಸನ್-2

## ಸ್ಟ್ರೈಕರ್ಸ್ ವಿರುದ್ಧ ಮಾಸ್ಟರ್ಸ್‌ಗೆ 45 ರನ್ ಭರ್ಜರಿ ಜಯ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ನಡೆಯುತ್ತಿರುವ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಸನ್-2ರ ಮೂರನೇ ಪಂದ್ಯದಲ್ಲಿ ಮಾಸ್ಟರ್ಸ್ ತಂಡವು ಸ್ಟ್ರೈಕರ್ಸ್ ವಿರುದ್ಧ 45 ರನ್‌ಗಳ ಭರ್ಜರಿ ಜಯ ದಾಖಲಿಸಿದೆ.

ಮಾಸ್ಟರ್ಸ್ ತಂಡದ ಓಪನರ್ ವಿಜಯ ಸೇನಾ ಅದ್ಭುತ ಪ್ರದರ್ಶನ ನೀಡಿದರು. 24 ಎಸೆತಗಳಲ್ಲಿ 7 ಸಿಕ್ಸರ್ ಸಹಿತ 54 ರನ್ ಗಳಿಸಿದ ಅವರು, ಪಂದ್ಯಾವಳಿಯಲ್ಲಿ ಮೊದಲ ಅರ್ಧಶತಕ ದಾಖಲಿಸಿದರು. ಜೊತೆಗೆ ಬೌಲಿಂಗ್‌ನಲ್ಲಿ ಒಂದು ಓವರ್‌ಗೆ 6 ರನ್ ನೀಡಿ ಒಂದು ವಿಕೆಟ್ ಪಡೆದ ಅವರು ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಮಾಸ್ಟರ್ಸ್ ತಂಡದ ಖಾಜಾ ಎಂ. 2 ಓವರ್‌ಗಳಲ್ಲಿ 11 ರನ್ ನೀಡಿ 2 ವಿಕೆಟ್ ಪಡೆದು ಶ್ರೇಷ್ಠ ಬಾಲರ್ ಎನಿಸಿದರು.

ಟಾಸ್ ಸೋತು ಬ್ಯಾಟಿಂಗ್ ಮಾಡಿದ ಮಾಸ್ಟರ್ಸ್ ತಂಡ ನಿಗದಿತ 10 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 110 ರನ್ ಗಳಿಸಿತು. ವಿಜಯ ಸೇನಾ 54 ರನ್, ನಿಯಾಜ್ 23 ರನ್ ಹಾಗೂ ನಾಯಕ ವಿಶಾಲ್ 10 ರನ್ ಗಳಿಸಿದರು. ಸ್ಟ್ರೈಕರ್ಸ್ ಪರ ಇಸ್ರಾರ್ 2 ವಿಕೆಟ್ ಪಡೆದರು.

ಗುರಿ ಬೆನ್ನಟ್ಟಿದ ಸ್ಟ್ರೈಕರ್ಸ್ ತಂಡ 10 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 65 ರನ್ ಗಳಿಸಿ ಸೋಲು ಕಂಡಿತು. ಮಾಸ್ಟರ್ಸ್ ಪರ ಖಾಜಾ ಎಂ. 2 ವಿಕೆಟ್ ಪಡೆದು ಮಿಂಚಿದರು. ವಿಜಯ ಸೇನಾ ಸೇರಿದಂತೆ ಇತರ ಬೌಲರ್‌ಗಳು ತಲಾ ಒಂದು ವಿಕೆಟ್ ಪಡೆದರು.

# ಕೆಯುಡಬ್ಲುಜೆ ರಾಜ್ಯ ಸಮಿತಿಗೆ ಗಣಪತಿ ಗಂಗೊಳ್ಳಿ ನಾಮನಿರ್ದೇಶನ



■ **ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲುಜೆ) ರಾಜ್ಯ ಕಾರ್ಯಕಾರಿ ಸಮಿತಿಗೆ ಹುಬ್ಬಳ್ಳಿಯ ಹಿರಿಯ ಪತ್ರಕರ್ತ ಗಣಪತಿ ಗಂಗೊಳ್ಳಿ ನಾಮನಿರ್ದೇಶನಗೊಂಡಿದ್ದಾರೆ.

ದಿ. 12ರಂದು ಬೀದರ್‌ನಲ್ಲಿ ನಡೆದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಗಂಗೊಳ್ಳಿಯವರ ನಾಮನಿರ್ದೇಶನವನ್ನು ಪ್ರಕಟಿಸಿ ಆದೇಶ ನೀಡಿದ್ದಾರೆ.

ಗಣಪತಿ ಗಂಗೊಳ್ಳಿಯವರು ಪ್ರಸ್ತುತ ಹುಬ್ಬಳ್ಳಿಯ "ಸಂಜೆ" ದಿನಪತ್ರಿಕೆಯ ಕಾರ್ಯನಿರ್ವಾಹಕ ಸಂಪಾದಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಇವರು ಈ ಹಿಂದೆ ಧಾರವಾಡ ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ಎರಡು ಅವಧಿ ಸೇವೆ ಸಲ್ಲಿಸಿದ್ದು, ಒಂದು ಅವಧಿ ರಾಜ್ಯ ಸಮಿತಿ ಸದಸ್ಯರಾಗಿಯೂ ಕಾರ್ಯನಿರ್ವಹಿಸಿದ್ದಾರೆ.

ಗಂಗೊಳ್ಳಿಯವರು ಪ್ರಸ್ತುತ ರಾಜ್ಯ ಮಾಧ್ಯಮ ಮಾನ್ಯತಾ ಸಮಿತಿಯ ಸದಸ್ಯರಾಗಿಯೂ ಕಾರ್ಯನಿರ್ವಹಿಸುತ್ತಿದ್ದು, ಪತ್ರಿಕೋದ್ಯಮ ಕ್ಷೇತ್ರದಲ್ಲಿ ಸಕ್ರಿಯ ಪಾತ್ರ ವಹಿಸುತ್ತಿದ್ದಾರೆ.

# ಜು.11ರಂದು ರಾಷ್ಟ್ರೀಯ ಲೋಕ ಅದಾಲತ್

■ **ವಿಜಯಸಾಕ್ಷಿ ಸುದ್ದಿ, ಧಾರವಾಡ**

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆದೇಶದ ಮೇರೆಗೆ ಧಾರವಾಡ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಜುಲೈ 11, 2026ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗುತ್ತಿದೆ.

ಲೋಕ ಅದಾಲತ್‌ನಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ರಾಜಿ ಆಗಬಹುದಾದ ವಿವಿಧ ಪ್ರಕರಣಗಳು ಹಾಗೂ ವ್ಯಾಜ್ಯಪೂರ್ವ ಪ್ರಕರಣಗಳನ್ನು ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಪೂರ್ವವ್ಯಾಜ್ಯ ಪ್ರಕರಣಗಳು ಮತ್ತು ನ್ಯಾಯಾಲಯಗಳಲ್ಲಿ ರಾಜಿ ಆಗಬಹುದಾದ ಪ್ರಕರಣಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ರಾಜಿ ಸಂಧಾನ ಮಾಡಿಕೊಳ್ಳಲು ಸಾರ್ವಜನಿಕರು ಈ ಅವಕಾಶವನ್ನು ಬಳಸಿಕೊಳ್ಳಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪರಶುರಾಮ ಎಫ್. ದೊಡ್ಡಮನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳಿಗೆ 'ವಿಸ್ಮಯ' ಬೇಸಿಗೆ ಶಿಬಿರ ಆರಂಭ

## ಗದಗ ಐಎಂಎ ಶತಮಾನೋತ್ಸವ



■ **ವಿಜಯಸಾಕ್ಷಿ ಸುದ್ದಿ, ಗದಗ**

ಬೇಸಿಗೆ ರಜೆಗಳನ್ನು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ, ಸೃಜನಶೀಲತೆ ಮತ್ತು ಬೌದ್ಧಿಕ ವಿಕಸನ ಹೆಚ್ಚಿಸುವ ದಿಕ್ಕಿನಲ್ಲಿ ಬಳಸಿಕೊಳ್ಳಬೇಕು ಎಂದು ಗದಗ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಹೇಳಿದರು.

ಬೆಟಗೇರಿಯ ಖಗೋಳ ತಾರಾಲಯದಲ್ಲಿ ಭಾರತೀಯ ವೈದ್ಯಕೀಯ ಸಂಘ (ಐಎಂಎ) ಗದಗ ಶಾಖೆಯ ಶತಮಾನೋತ್ಸವ ಅಂಗವಾಗಿ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ 'ವಿಸ್ಮಯ' ಬೇಸಿಗೆ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ವಿಜ್ಞಾನಾಸಕ್ತಿ, ಸೃಜನಾತ್ಮಕತೆ ಹಾಗೂ ಜೀವನ ಕೌಶಲ್ಯಗಳನ್ನು ಬೆಳೆಸುವ ಉದ್ದೇಶದಿಂದ ಈ ರೀತಿಯ ಶಿಬಿರಗಳನ್ನು ಆಯೋಜಿಸಿರುವುದು ಅಭಿನಂದನೀಯವಾಗಿದೆ. ಸರ್ಕಾರೇತರ ಸಂಸ್ಥೆಗಳು ಉಚಿತ ಖಗೋಳ ವೀಕ್ಷಣೆ, ಪ್ರಾಣಿಸಂಗ್ರಹಾಲಯ ಭೇಟಿ ಸೇರಿದಂತೆ ವಿದ್ಯಾರ್ಥಿಗಳಿಗೆ ಉಪಯುಕ್ತ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.

ಶಿಬಿರದ ಮೂಲಕ ಮಕ್ಕಳಲ್ಲಿ ವೈಜ್ಞಾನಿಕ ಚಿಂತನೆ ಬೆಳೆಸಿ ಮೂಢನಂಬಿಕೆಗಳನ್ನು ದೂರ ಮಾಡುವ ಕಾರ್ಯ ನಡೆಯಬೇಕು ಎಂದು ಅವರು ತಿಳಿಸಿದರು.

ಐಎಂಎ ಗದಗ ಅಧ್ಯಕ್ಷ ಡಾ. ಶ್ರೀಧರ ಕುರಡಗಿ ಮಾತನಾಡಿ, ಶತಮಾನೋತ್ಸವದ ಅಂಗವಾಗಿ ಸಮಾಜಮುಖಿ ಕಾರ್ಯಕ್ರಮಗಳನ್ನು ವರ್ಷಪೂರ್ತಿ ಹಮ್ಮಿಕೊಳ್ಳಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ ತಪಾಸಣೆ, ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಸಹಕಾರ ನೀಡುವಂತಹ ಹಲವು ಯೋಜನೆಗಳನ್ನು ರೂಪಿಸಲಾಗಿದೆ ಎಂದು ಹೇಳಿದರು.

ಮಕ್ಕಳಿಗೆ ಖಗೋಳ ವಿಸ್ಮಯದ ಜೊತೆಗೆ ಪ್ರಾಣಿ ಜಗತ್ತಿನ ಪರಿಚಯವೂ ಸಿಗುವಂತೆ ತಾರಾಲಯ ಹಾಗೂ ಪ್ರಾಣಿಸಂಗ್ರಹಾಲಯ ವೀಕ್ಷಣೆಯ ವ್ಯವಸ್ಥೆ ಮಾಡಲಾಗಿದೆ. ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶ, ಪೋಷಕರಿಗೆ ಶೇ. 50 ರಷ್ಟು ರಿಯಾಯಿತಿ ನೀಡಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶತಮಾನೋತ್ಸವ ಸಮಿತಿ ಅಧ್ಯಕ್ಷ ಡಾ. ಎಸ್.ಆರ್. ನಾಗನೂರ, ಲಯನ್ಸ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಆನಂದ ಪೊತ್ನೀಸ್, ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಪ್ರಾಣಿಸಂಗ್ರಹಾಲಯ ಉಸ್ತುವಾರಿ ರಾಮಪ್ಪ ಪೂಜಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

> ಶಾಲಾ ಮಕ್ಕಳಿಗೆ ಮೇ 3ರವರೆಗೆ ಉಚಿತವಾಗಿರುವ ಈ ಶಿಬಿರವು ಪ್ರತಿ ದಿನ ನಾಲ್ಕು ಬ್ಯಾಚ್‌ಗಳಲ್ಲಿ ತರಗತಿಗಳು ನಡೆಯಲಿವೆ. ಮುಂಜಾನೆ 10:30 ರಿಂದ 12, ಮಧ್ಯಾಹ್ನ 12:30 ರಿಂದ 1:30, ಮಧ್ಯಾಹ್ನ 2 ರಿಂದ 3 ಹಾಗೂ ಸಂಜೆ 3:30 ರಿಂದ 4:30 ಗಂಟೆಯವರೆಗೆ. ಸಾರ್ವಜನಿಕರಿಗೆ ತಾರಾಲಯದಲ್ಲಿ ಖಗೋಳ ವೀಕ್ಷಣೆಗೆ 100 ರೂ. ಬದಲಾಗಿ 50 ರೂ. ನಿಗದಿಗೊಳಿಸಲಾಗಿದೆ. ನೋಂದಣಿಗಾಗಿ 9538985825, 7353979722, 7676982850, 9448805679 ಮೊಬೈಲ್‌ಗೆ ಸಂಪರ್ಕಿಸಬಹುದು.

# ಮಕ್ಕಳ ಸರ್ವೋನ್ನತಿಗೆ ಸಂಸ್ಕೃತಿ-ಸಂಸ್ಕಾರಗಳ ಜ್ಞಾನ ಸಹಕಾರಿ

## ಬಸವ ಯೋಗ ಮಂದಿರದಲ್ಲಿ ಸಂಸ್ಕೃತಿ-ಸಂಸ್ಕಾರ ಶಿಬಿರ ಪ್ರಾರಂಭೋತ್ಸವ



■ **ವಿಜಯಸಾಕ್ಷಿ ಸುದ್ದಿ, ಗದಗ**

ಒಬ್ಬ ರೈತ ತನ್ನ ಭೂಮಿಯಲ್ಲಿ ಬಿತ್ತಿದ ಬೀಜ ಫಲಕೊಡುವ ತನಕ ಬೇಕಾದ ಅಗತ್ಯತೆಗಳನ್ನು ಪೂರೈಸುತ್ತಾನೆ. ಆದರೆ ಪಾಲಕರಾದ ನಾವು ಮಕ್ಕಳ ಶ್ರೇಯೋಭಿವೃದ್ಧಿಗೆ ಅಗತ್ಯವಿರುವ ಸೌಲಭ್ಯಗಳನ್ನು ಪೂರೈಸಲು ಅಸಮರ್ಥರಾಗಿದ್ದೇವೆ. ಇಂದು ಮಕ್ಕಳು ಬಯಸಿದ್ದನ್ನು ಕೊಡಿಸುತ್ತೇವೆ, ಅವರ ಭವಿಷ್ಯ ಜೀವನ ಬಗ್ಗೆ ಆಲೋಚಿಸುವುದಿಲ್ಲ ಎಂದು ಖ್ಯಾತ ಆಯುರ್ವೇದ ವೈದ್ಯ ಹಾಗೂ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಡಾ. ಉಮೇಶ ವ್ಹಿ. ಪುರದ ಹೇಳಿದರು.

ಎಸ್.ವ್ಹೈ.ಬಿ.ಎಂ.ಎಸ್. ಯೋಗಪಾಠಶಾಲೆ ಗದಗ ಮತ್ತು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ-2026 ಗದಗ ಇವರುಗಳ ಸಂಯುಕ್ತಾಶ್ರಯದಲ್ಲಿ ಬೇಸಿಗೆ ರಜೆ ಪ್ರಯುಕ್ತ ಶಾಲಾ ಮಕ್ಕಳಿಗಾಗಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಸಂಸ್ಕೃತಿ-ಸಂಸ್ಕಾರ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಾವು ಮಕ್ಕಳು ಮೊಬೈಲ್ ಬೇಡಿದರೆ ತಕ್ಷಣ ಕೊಡುತ್ತೇವೆ. ಆದರೆ ಮಕ್ಕಳಿಗೆ ಮೊಬೈಲ್ ಬಳಕೆಯ ಜ್ಞಾನ ಸಂಪೂರ್ಣವಾಗಿರುವುದಿಲ್ಲ. ಅವರು ತನಗೆ ತಿಳಿದಿದ್ದನ್ನು, ತನಗಿಷ್ಟವಾದುದನ್ನು ನೋಡುತ್ತಾರೆ. ಇದರಿಂದ ಮಕ್ಕಳ ಆಲೋಚನಾ ಶಕ್ತಿ, ಕ್ರಿಯಾಶಕ್ತಿಗಳು ಕುಂಠಿತಗೊಳ್ಳುತ್ತವೆ. ಮುಂದೊಂದು ದಿನ ಅವರ ಅಹಿತಕರ ಕಾರ್ಯ ಚಟುವಟಿಕೆಗಳ ಪರಿಣಾಮ ನೋಡಿ ಪಶ್ಚಾತ್ತಾಪ ಪಡುತ್ತೇವೆ ಎಂದರು.

ಜಗದ್ಗುರು ತೋಂಟದಾರ್ಯ ಮಠದ ಜಾತ್ರೆ ಕೇವಲ ಜಾತ್ರೆಗೆ ಸೀಮಿತವಾಗಿರದೆ ಜಾತ್ರೆಯ ಅಂಗವಾಗಿ ದುಶ್ಚಟ ನಿವಾರಣೆಗೆ ಜಾಗೃತಿ ಪಾದಯಾತ್ರೆ, ಗ್ರಂಥ ಬಿಡುಗಡೆ, ಸನ್ಮಾನ ಕಾರ್ಯಕ್ರಮಗಳ ಜೊತೆಗೆ ಮಕ್ಕಳ ಜ್ಞಾನ ವೃದ್ಧಿಗಾಗಿ ಸಂಸ್ಕೃತಿ-ಸಂಸ್ಕಾರ ಶಿಬಿರವನ್ನು ಉಚಿತವಾಗಿ ನಡೆಸುತ್ತಿರುವುದು ಶ್ಲಾಘನೀಯವಾಗಿದೆ. ಇಂಥ ಕಾರ್ಯಗಳಿಂದ ಸಮಾಜದಲ್ಲಿರುವ ಎಷ್ಟೋ ಸಮಸ್ಯೆಗಳು ಇಲ್ಲವಾಗುತ್ತವೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ತೆರಿಗೆ ಸಲಹೆಗಾರರು ಮತ್ತು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿಯ ಕಾರ್ಯದರ್ಶಿಯಾದ ಚೇತನ ಬಿ. ಅಂಗಡಿ ಅವರು, ಶಿಬಿರದ ಮಹತ್ವ ಮತ್ತು ಶಿಬಿರಾರ್ಥಿಗಳು ಪರಿಪಾಲಿಸಬೇಕಾದ ನಿಯಮಗಳನ್ನು ತಿಳಿಸಿ, ಶಿಬಿರಾರ್ಥಿಗಳು ಶಿಬಿರದಲ್ಲಿ ಹೊಸತನ ಕಲಿಯಬೇಕು, ಕಲಿತದ್ದನ್ನು ಜೀವನದುದ್ದಕ್ಕೂ ಪಾಲಿಸಬೇಕೆಂದು ತಿಳಿಸಿ ಶಿಬಿರಾರ್ಥಿಗಳಿಗೆ ಶಿಬಿರದ ಟಿಪ್ಪಣಿ, ನೋಟಬುಕ್ ಮತ್ತು ಪೆನ್ನುಗಳನ್ನು ವಿತರಿಸಿದರು.

ಅಧ್ಯಕ್ಷತೆ ವಹಿಸಿದ ಸ್ಥಳೀಯ ಡಿ.ಜಿ.ಎಂ. ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪ್ರಾಧ್ಯಾಪಕರಾದ ಡಾ. ಎಂ.ವಿ. ಐಹೊಳ್ಳಿ ಮಾತನಾಡಿ, ನಮಗೆ ಮತ್ತು ನಮ್ಮ ದೇಶಕ್ಕೆ ಮಕ್ಕಳು ಬಹುದೊಡ್ಡ ಆಸ್ತಿಯಾಗಿದ್ದಾರೆ. ಈ ಆಸ್ತಿಯನ್ನು ಜಾಗರೂಕತೆಯಿಂದ ಸಂರಕ್ಷಿಸಬೇಕು. ಮಕ್ಕಳ ಯೋಗಕ್ಷೇಮವನ್ನು ನಿಭಾಯಿಸಬೇಕು. ಇಂದು ಹೊಸ ಹೊಸ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಜೊತೆಯಲ್ಲಿ ಪ್ರಾಥಮಿಕ ಶಾಲೆಗಳ ಗುಣಮಟ್ಟವನ್ನು ಹೆಚ್ಚಿಸುವುದು ಅಗತ್ಯವಾಗಿದೆ ಎಂದರು..

ಸಭಾಂಗಣದಲ್ಲಿ ಯೋಗ ಪಾಠಶಾಲೆಯ ಸಕ್ರೀಯ ಅಭಿಮಾನಿ ಕಾರ್ಯಕರ್ತರಾದ ಜಿ.ಪಿ. ಕಟ್ಟಿಮನಿ ಗುರುಗಳು, ಅಶೋಕ ಬಾರಕೇರ, ಶಿಬಿರಾರ್ಥಿಗಳ ಪಾಲಕರು ಹಾಗೂ ಅಭ್ಯರ್ಥಿಗಳು ಉಪಸ್ಥಿತರಿದ್ದರು.

> "ಬಾಲ್ಯಾವಸ್ಥೆಯಿಂದಲೇ ನಾವು ಮಕ್ಕಳನ್ನು ದೈಹಿಕವಾಗಿ, ಮಾನಸಿಕವಾಗಿ, ಸಾಮಾಜಿಕವಾಗಿ, ನೈತಿಕವಾಗಿ ಸದೃಢರನ್ನಾಗಿಸಬೇಕು. ಅವರಿಗೆ ಬದುಕಲು ಬೇಕಾದ ಅಗತ್ಯವಿರುವ ಕಲೆ, ಕ್ರೀಡೆ, ಸಾಹಿತ್ಯ, ಪರಿಸರ, ಸಂಸ್ಕೃತಿ, ಸಂಸ್ಕಾರಗಳ ಅರಿವು ಮೂಡಿಸಬೇಕು. ಅವರ ಸರ್ವತೋಮುಖ ಬೆಳವಣಿಗೆಗೆ ಶ್ರಮಿಸಬೇಕು. ಈ ಹಿನ್ನೆಲೆಯಲ್ಲಿ ಮಕ್ಕಳ ಸರ್ವೋನ್ನತಿಗೆ ಸಂಸ್ಕೃತಿ-ಸಂಸ್ಕಾರಗಳ ಜ್ಞಾನ ಸಹಕಾರಿಯಾಗಿದೆ"
>
> **– ಡಾ. ಉಮೇಶ ವ್ಹಿ. ಪುರದ.**

# ಪಂಚಕಲ್ಯಾಣ ಮಹೋತ್ಸವ: ಕೊಪ್ಪಳದಲ್ಲಿ ಜೈನ ಪರಂಪರೆಯ ಭವ್ಯ ಪುನರುತ್ಥಾನ



■ **ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಜಿಲ್ಲೆಯ ಕುಷ್ಟಗಿ ತಾಲೂಕಿನ ನಿಲೋಗಲ್ಲ ಗ್ರಾಮದಲ್ಲಿ ನಡೆದ ಪಂಚಕಲ್ಯಾಣ ಮಹೋತ್ಸವವು ಜೈನ ಧರ್ಮದ ಶ್ರದ್ಧಾ ಪರಂಪರೆ, ಆಧ್ಯಾತ್ಮಿಕ ಮೌಲ್ಯಗಳು ಮತ್ತು ಸಾಂಸ್ಕೃತಿಕ ಭವ್ಯತೆಯ ಅಪೂರ್ವ ಸಂಗಮವಾಗಿ ಗಮನ ಸೆಳೆದಿದೆ. ಸುಮಾರು 300 ವರ್ಷಗಳ ಹಳೆಯ ಜೀರ್ಣಾವಸ್ಥೆಯಲ್ಲಿದ್ದ ಬಸದಿ ಪುನರ್‌ನಿರ್ಮಾಣಗೊಂಡು, ನೂತನ ಪಾರ್ಶ್ವನಾಥ ಶಿಲ್ಪ ಹಾಗೂ ಮಾನಸ್ತಂಭದಲ್ಲಿ ಚತುರ್ಮುಖ ಜಿನಬಿಂಬ ಪ್ರತಿಷ್ಠಾಪನೆಯೊಂದಿಗೆ ಧಾರ್ಮಿಕ ಉತ್ಸವಕ್ಕೆ ಹೊಸ ಜೀವ ತುಂಬಲಾಗಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಪ್ರಾಧ್ಯಾಪಕ ಡಾ. ಅಪ್ಪಣ್ಣ ಹಂಜೆ, ಕೊಪ್ಪಳವು ಜೈನ ಧರ್ಮದ ಆದಿತೀರ್ಥ ಹಾಗೂ ಮಹಾತೀರ್ಥವಾಗಿ ಪ್ರಾಚೀನ ಕಾಲದಿಂದಲೇ ಗುರುತಿಸಿಕೊಂಡಿರುವ ಪ್ರದೇಶವಾಗಿದೆ. ಈ ನೆಲದಲ್ಲಿ ನೂರಾರು ಜೈನ ಮುನಿಗಳು ಸಲ್ಲೇಖನದ ಮೂಲಕ ಸಮಾಧಿಮರಣ ಹೊಂದಿದ್ದು, ಈ ಭೂಮಿಯನ್ನು ಆಧ್ಯಾತ್ಮಿಕ ಶಕ್ತಿಯ ಕೇಂದ್ರವನ್ನಾಗಿ ರೂಪಿಸಿದ್ದಾರೆ ಎಂದರು. ಪಂಚಕಲ್ಯಾಣ ಮಹೋತ್ಸವದ ಮಹತ್ವವನ್ನು ವಿವರಿಸಿದ ಅವರು, ತೀರ್ಥಂಕರರ ಜೀವನದ ಗರ್ಭಾವತರಣ, ಜನ್ಮಾಭಿಷೇಕ, ದೀಕ್ಷೆ, ಕೇವಲಜ್ಞಾನ ಹಾಗೂ ಪರಿನಿರ್ವಾಣದ ಪವಿತ್ರ ಘಟನಾವಳಿಗಳನ್ನು ಶಾಸ್ತ್ರೋಕ್ತವಾಗಿ ಮರುಅವತಾರಗೊಳಿಸುವ ವಿಶಿಷ್ಟ ಪರಂಪರೆ ಇದಾಗಿದೆ. ಇಂದ್ರಾದಿದೇವತೆಗಳ ಪಾತ್ರವೇಷಗಳು, ಶ್ರಾವಕ-ಶ್ರಾವಿಕೆಯರ ಭಾಗವಹಿಸುವಿಕೆ ಮತ್ತು ಪ್ರತಿಷ್ಠಾಚಾರ್ಯರ ಮಾರ್ಗದರ್ಶನದಲ್ಲಿ ನಡೆಯುವ ಈ ಆಚರಣೆ ಜೈನ ಸಂಸ್ಕೃತಿಯ ವೈಶಿಷ್ಟ್ಯವೆಂದು ಹೇಳಿದರು.

ಮಹೋತ್ಸವ ಸಮಿತಿ ಅಧ್ಯಕ್ಷ ಅಭಿನಂದನ ಗೋಗಿ ಮಾತನಾಡಿ, ಕೇವಲ ಆರು ಜೈನ ಕುಟುಂಬಗಳಿರುವ ಈ ಗ್ರಾಮದಲ್ಲೇ ಇಂತಹ ಭವ್ಯ ಉತ್ಸವ ನಡೆಯುತ್ತಿರುವುದು ಧಾರ್ಮಿಕ ಸಾಮರಸ್ಯ ಮತ್ತು ಭಾವೈಕ್ಯತೆಗೆ ಉದಾಹರಣೆಯಾಗಿದೆ. ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ ಭಕ್ತರ ಸಹಕಾರ ಈ ಉತ್ಸವವನ್ನು ಯಶಸ್ವಿಗೊಳಿಸಿದೆ ಎಂದರು.

ಆಚಾರ್ಯಶ್ರೀ ಪುಣ್ಯಸಾಗರ ಮಹಾರಾಜರು ಸೇರಿದಂತೆ ವಿವಿಧ ಜೈನ ಮಠಗಳ ಭಟ್ಟಾರಕರ ಸಾನ್ನಿಧ್ಯದಲ್ಲಿ ನಡೆದ ಈ ಮಹೋತ್ಸವದಲ್ಲಿ ಕೊಪ್ಪಳ ಮಾತ್ರವಲ್ಲದೇ ಬಾಗಲಕೋಟೆ, ಗದಗ, ವಿಜಯಪುರ, ಧಾರವಾಡ ಸೇರಿದಂತೆ ಹಲವಾರು ಜಿಲ್ಲೆಗಳ ಶ್ರಾವಕ-ಶ್ರಾವಿಕೆಯರು ಭಾಗವಹಿಸಿ ಧಾರ್ಮಿಕ ಸಂಭ್ರಮಕ್ಕೆ ಸಾಕ್ಷಿಯಾದರು.

# ಡಂಬಳ ತೋಂಟದಾರ್ಯ ಪಿಯು ಕಾಲೇಜು ಸಾಧನೆ







■ **ವಿಜಯಸಾಕ್ಷಿ ಸುದ್ದಿ, ಡಂಬಳ**

2025-2026ನೇ ಸಾಲಿನ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಡಂಬಳ ತೋಂಟದಾರ್ಯ ವಿದ್ಯಾಪೀಠ ಸಂಯುಕ್ತ ಪದವಿ ಪೂರ್ವ ಕಾಲೇಜು ಗಮನಾರ್ಹ ಸಾಧನೆ ದಾಖಲಿಸಿದೆ. ವಿಶೇಷವಾಗಿ ಕಲಾ ವಿಭಾಗದಲ್ಲಿ ವಿದ್ಯಾರ್ಥಿಗಳು ಉನ್ನತ ಅಂಕಗಳನ್ನು ಗಳಿಸುವ ಮೂಲಕ ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಕಲಾ ವಿಭಾಗದಲ್ಲಿ ರಾಘವೇಂದ್ರ ಆಲೂರ 553 ಅಂಕಗಳು (ಶೇ.92.16) ಗಳಿಸಿ ಪ್ರಥಮ ಸ್ಥಾನ ಪಡೆದಿದ್ದಾರೆ. ಲಕ್ಷ್ಮವ್ವ ಸೋಮನಕಟ್ಟಿ 526 ಅಂಕಗಳು (ಶೇ.87.66) ಪಡೆದು ದ್ವಿತೀಯ ಸ್ಥಾನದಲ್ಲಿದ್ದರೆ, ಧರ್ಮರಾಜ ಹರಿಜನ 510 ಅಂಕಗಳು (ಶೇ.85) ಗಳಿಸಿ ತೃತೀಯ ಸ್ಥಾನವನ್ನು ಪಡೆದಿದ್ದಾರೆ.

ಕಾಲೇಜಿನಲ್ಲಿ ಅರ್ಥಶಾಸ್ತ್ರ ವಿಷಯದಲ್ಲಿ ಶೇ.100 ಫಲಿತಾಂಶ ದಾಖಲಾಗಿದ್ದು, ಒಟ್ಟು ಫಲಿತಾಂಶ ಶೇ.85.29ಕ್ಕೆ ತಲುಪಿದೆ. ಫಲಿತಾಂಶದ ವಿವರಗಳ ಪ್ರಕಾರ, ಅತ್ಯುತ್ತಮ ಶ್ರೇಣಿಯಲ್ಲಿ 3 ವಿದ್ಯಾರ್ಥಿಗಳು, ಪ್ರಥಮ ದರ್ಜೆಯಲ್ಲಿ 19, ದ್ವಿತೀಯ ದರ್ಜೆಯಲ್ಲಿ 5 ಹಾಗೂ ತೃತೀಯ ದರ್ಜೆಯಲ್ಲಿ 2 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. "ವಿದ್ಯಾರ್ಥಿಗಳ ಪರಿಶ್ರಮ ಹಾಗೂ ಶಿಕ್ಷಕರ ಮಾರ್ಗದರ್ಶನದ ಫಲವಾಗಿ ಈ ಸಾಧನೆ ಸಾಧ್ಯವಾಗಿದೆ," ಎಂದು ಸಂಸ್ಥೆಯ ಆಡಳಿತ ಮಂಡಳಿ ಅಭಿಪ್ರಾಯಪಟ್ಟಿದೆ.ಈ ಸಾಧನೆಗೆ ಸಂಸ್ಥೆಯ ಜಗದ್ಗುರು ತೋಂಟದಾರ್ಯ ಸಿದ್ಧರಾಮ ಸ್ವಾಮಿಗಳು, ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ ಹಾಗೂ ಪ್ರಾಚಾರ್ಯ ಮಲ್ಲಿಕಾರ್ಜುನ ಮಡಿವಾಳರವರು ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

# ಲಕ್ಕುಂಡಿಯಲ್ಲಿ ಸಂಭ್ರಮದ ಸಾಮೂಹಿಕ ವಿವಾಹ

## ಆಧ್ಯಾತ್ಮಿಕ ವಾತಾವರಣದಲ್ಲಿ 6 ಜೋಡಿಗಳ ದಾಂಪತ್ಯ ಜೀವನಕ್ಕೆ ಪಾದಾರ್ಪಣೆ

■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಅಖಂಡ 38 ವರ್ಷಗಳ ಮೌನಾಚರಣೆಯ ಮೂಲಕ ಸಮಾಜ ಸುಧಾರಣೆಗೆ ಕೈಜೋಡಿಸಿದ ಲಿಂಗೈಕ್ಯ ಬಸವರಾಜೇಂದ್ರ ಮಹಾಸ್ವಾಮಿಜಿಗಳ ಸಮಾಜಮುಖಿ ಕಾರ್ಯ ಶ್ಲಾಘನೀಯವಾಗಿದೆ. ಅವರ ಮೌನ ತಪಸ್ಸಿನ ಆಶೀರ್ವಾದದಿಂದ ನೂತನ ವಧು-ವರರ ದಾಂಪತ್ಯ ಜೀವನ ಸುಖಕರವಾಗಿರಲಿದೆ ಎಂದು ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಜಿಗಳು ಹೇಳಿದರು.

ಇಲ್ಲಿನ ಅಲ್ಲಮ್ಮಪ್ರಭುದೇವರ ಮಠದಲ್ಲಿ ಬಸವರಾಜೇಂದ್ರ ಮಹಾಸ್ವಾಮಿಜಿಗಳ ರಥೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಅವರು ಮಾತನಾಡಿದರು.



ಅಲ್ಲಮ್ಮಪ್ರಭುದೇವರು ಧ್ಯಾನ ಮಾಡಿದ ಈ ಪವಿತ್ರ ಸ್ಥಳದಲ್ಲಿ ಸಕಾರಾತ್ಮಕ ಚಿಂತನೆಗಳು ಬೆಳೆಯುತ್ತವೆ. ಆದ್ದರಿಂದ ನೂತನ ವಧು-ವರರು ಜೀವನದಲ್ಲಿ ಆಧ್ಯಾತ್ಮಿಕ ಮೌಲ್ಯಗಳನ್ನು ಅಳವಡಿಸಿಕೊಂಡು ಪರಸ್ಪರ ಹಂಚಿಕೊಳ್ಳಬೇಕು ಹಾಗೂ ಮಠದೊಂದಿಗೆ ಬಾಂಧವ್ಯ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಹರಪನಹಳ್ಳಿ ತಾಲೂಕಿನ ನೀಲಗುಂದ ಗ್ರಾಮದ ಗುಡ್ಡದ ಸುಕ್ಷೇತ್ರದ ಚನ್ನಬಸವ ಶಿವಯೋಗಿಗಳು ಮಾತನಾಡಿ, ಇಂದಿನ ವಿಜ್ಞಾನ ಮತ್ತು ತಂತ್ರಜ್ಞಾನದ ಯುಗದಲ್ಲಿ ಅತಿಯಾಗಿ ಹಣ ಖರ್ಚು ಮಾಡುವ ಮದುವೆಗಳ ಬದಲು ಶ್ರದ್ಧಾ ಕೇಂದ್ರಗಳಲ್ಲಿ ನಡೆಯುವ ಸಾಮೂಹಿಕ ವಿವಾಹಗಳಲ್ಲಿ ಭಾಗವಹಿಸುವುದು ಆರ್ಥಿಕವಾಗಿ ಸಹಕಾರಿ ಆಗುವುದರ ಜೊತೆಗೆ ಮಠ-ಮಾನ್ಯಗಳ ಬೆಳವಣಿಗೆಗೂ ಸಹಾಯಕವಾಗುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಹಾಂತಯ್ಯಶಾಸ್ತ್ರಿಗಳು ಬದ್ನಿಮಠ, ಶಂಕ್ರಯ್ಯಶಾಸ್ತ್ರಿಗಳು ಹಿರೇಮಠ ಅವರ ನೇತೃತ್ವದಲ್ಲಿ 6 ಜೋಡಿ ದಂಪತಿಗಳ ವಿವಾಹ ನೆರವೇರಿತು.

ಇದೇ ಸಂದರ್ಭದಲ್ಲಿ ಮಠದ ಜೀರ್ಣೋದ್ಧಾರಕ್ಕಾಗಿ ಸೋಬಾನ ಪದ ಅಕಾಡೆಮಿ ಪ್ರಶಸ್ತಿ ವಿಜೇತೆ ಲಕ್ಷ್ಮವ್ವ ಗೌಳಿ ಅವರು 1 ಲಕ್ಷ ದೇಣಿಗೆ ನೀಡಿದರು. ತೇರಿನ ಮನೆ ನಿರ್ಮಾಣಕ್ಕೆ ಕುರುಬ ಸಮಾಜದಿಂದ 65 ಸಾವಿರ ದೇಣಿಗೆ ನೀಡಲಾಯಿತು. ಕಾರ್ಯಕ್ರಮದಲ್ಲಿ ಸಿದ್ಧಲಿಂಗೇಶ್ವರ ಸ್ವಾಮೀಜಿ, ಮುದಕಯ್ಯ ಪತ್ರಿಮಠ ಸ್ವಾಮಿಗಳು, ಕೊಟ್ರಯ್ಯಶಾಸ್ತ್ರಿಗಳು ನರಗುಂದಮಠ ಹಾಗೂ ಅಲ್ಲಮ್ಮಪ್ರಭುದೇವರ ಸೇವಾ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

> "ಆಡಂಬರ ಮದುವೆಗಳಿಗಿಂತ ಸಾಮೂಹಿಕ ವಿವಾಹಗಳು ಸಮಾಜಕ್ಕೆ ಹಾಗೂ ಕುಟುಂಬಗಳಿಗೆ ಆರ್ಥಿಕವಾಗಿ ಅನುಕೂಲಕರ,"
>
> **– ಚನ್ನಬಸವ ಶಿವಯೋಗಿಗಳು.**

# ಗದಗ-ಕೊಪ್ಪಳ ಮಾರ್ಗಕ್ಕೆ ವಂದೇ ಭಾರತ ರೈಲು ವಿಸ್ತರಿಸಲು ಆಗ್ರಹ



■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಕೇಂದ್ರ ಸರ್ಕಾರವು ಪ್ರಯಾಣಿಕರ ಅನುಕೂಲಕ್ಕಾಗಿ ಆರಂಭಿಸಿರುವ ವಂದೇ ಭಾರತ ರೈಲು ಸೇವೆ ಶ್ಲಾಘನೀಯವಾಗಿದ್ದು, ಜನರಿಗೆ ವೇಗದ ಪ್ರಯಾಣದ ಅವಕಾಶ ಕಲ್ಪಿಸಿದೆ ಎಂದು ಸಾಮಾಜಿಕ ಕಾರ್ಯಕರ್ತ ಕೃಷ್ಣಾ ನಾ. ರಾಯಬಾಗಿ ಹೇಳಿದ್ದಾರೆ.

ಆದರೆ ಈ ರೈಲು ಸೇವೆ ಹುಬ್ಬಳ್ಳಿ-ಸೊಲ್ಲಾಪುರ ಮಾರ್ಗಕ್ಕೆ ಮಾತ್ರ ಸೀಮಿತವಾಗಿರುವುದರಿಂದ ಗದಗ ಹಾಗೂ ಕೊಪ್ಪಳ ಜಿಲ್ಲೆಯ ಪ್ರಯಾಣಿಕರು ಇದರ ಪ್ರಯೋಜನದಿಂದ ವಂಚಿತರಾಗಿದ್ದಾರೆ ಎಂದು ಅವರು ಹೇಳಿದ್ದಾರೆ.

ವಂದೇ ಭಾರತ ರೈಲು ಸೇವೆಯನ್ನು ಹುಬ್ಬಳ್ಳಿ-ಗದಗ-ಕೊಪ್ಪಳ ಮಾರ್ಗದ ಮೂಲಕ ವಿಸ್ತರಿಸಿದರೆ ಈ ಪ್ರದೇಶದ ಜನರಿಗೆ ಹೆಚ್ಚಿನ ಅನುಕೂಲವಾಗುತ್ತದೆ ಎಂದು ಅವರು ಆಗ್ರಹಿಸಿದರು. ಅದರ ಜೊತೆಗೆ, ಹಬ್ಬದ ದಿನಗಳನ್ನು ಹೊರತುಪಡಿಸಿ ಉಳಿದ ದಿನಗಳಲ್ಲಿ ಪ್ರಯಾಣಿಕರ ಸಂಖ್ಯೆ ಕಡಿಮೆಯಾಗುತ್ತಿರುವುದರಿಂದ ರೈಲು ಇಲಾಖೆ ಆದಾಯ ನಷ್ಟವನ್ನು ಎದುರಿಸುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು. ಇದನ್ನು ಗಮನದಲ್ಲಿಟ್ಟುಕೊಂಡು ಟಿಕೆಟ್ ದರವನ್ನು ಸಾಮಾನ್ಯ ಜನರಿಗೆ ಕೈಗೆಟುಕುವಂತೆ ಮಾಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಜನಸಾಮಾನ್ಯರಿಗೆ ಅನುಕೂಲವಾಗುವಂತೆ ರೈಲು ಮಾರ್ಗ ವಿಸ್ತರಣೆ ಮತ್ತು ದರ ಪರಿಷ್ಕರಣೆ ಅಗತ್ಯವಿದೆ ಎಂದು ಅವರು ರೇಲ್ವೆ ಇಲಾಖೆಗೆ ಆಗ್ರಹಿಸಿದ್ದಾರೆ.

# ತಾರಾಲಯ ವೀಕ್ಷಣೆ ಮಕ್ಕಳಲ್ಲಿ ವಿಜ್ಞಾನ ಕುತೂಹಲ ಹೆಚ್ಚಿಸುತ್ತದೆ

## ಐಎಂಎ ಶತಮಾನೋತ್ಸವ ಅಂಗವಾಗಿ ಉಚಿತ ಖಗೋಳ ವೀಕ್ಷಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಐಎಂಎ ಶತಮಾನೋತ್ಸವದ ಅಂಗವಾಗಿ ಮಕ್ಕಳಿಗೆ ಉಚಿತ ಖಗೋಳ ವೀಕ್ಷಣೆಗೆ ಎಪ್ರಿಲ್ 15ರಿಂದ ಮೇ 3ರವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ತಿಳಿಸಿದ್ದಾರೆ.

ಗದಗ-ಬೆಟಗೇರಿ ತಾರಾಲಯದಲ್ಲಿ ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಆಯೋಜಿಸಲಾದ 'ವಿಸ್ಮಯ' ಖಗೋಳ ವೀಕ್ಷಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ತಾರಾಲಯ ವೀಕ್ಷಣೆ ಬ್ರಹ್ಮಾಂಡದ ವೈಜ್ಞಾನಿಕ ಅರಿವು ಮೂಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದರು.

ವಿಜ್ಞಾನವು ಮಾನವನ ಜೀವನವನ್ನು ಸುಗಮಗೊಳಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಅದನ್ನು ಜವಾಬ್ದಾರಿಯುತವಾಗಿ ಬಳಸಿದಾಗ ಮಾನವಕುಲದ ಪ್ರಗತಿ ಸಾಧ್ಯವಾಗುತ್ತದೆ. ಜಿಲ್ಲೆಯ ಮಕ್ಕಳ ಹಾಗೂ ಸಾರ್ವಜನಿಕರ ಉಪಯೋಗಕ್ಕಾಗಿ ತಾರಾಲಯ ನಿರ್ಮಿಸಲಾಗಿದ್ದು, ಇದು ಮಕ್ಕಳಲ್ಲಿ ರಚನಾತ್ಮಕ ಚಟುವಟಿಕೆಗಳಿಗೆ ಉತ್ತೇಜನ ನೀಡುತ್ತದೆ ಎಂದು ಹೇಳಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತಾಲೂಕಾವಾರು ಪ್ರಥಮ ಸ್ಥಾನ ಪಡೆದವರಿಗೆ 10,000, ದ್ವಿತೀಯ ಸ್ಥಾನಕ್ಕೆ 5,000 ಹಾಗೂ ತೃತೀಯ ಸ್ಥಾನಕ್ಕೆ 3,000 ಪ್ರೋತ್ಸಾಹಧನ ನೀಡಲಾಗುತ್ತದೆ ಎಂದು ತಿಳಿಸಿದರು.

ಐಎಂಎ ಶಾಖೆಯು ಶತಮಾನೋತ್ಸವದ ಅಂಗವಾಗಿ ಪ್ರಾಥಮಿಕ ಶಾಲೆಯಿಂದ ಪಿಯುಸಿ ವಿದ್ಯಾರ್ಥಿಗಳವರೆಗೆ ಉಚಿತ 'ವಿಸ್ಮಯ' ಪ್ರದರ್ಶನವನ್ನು ಏರ್ಪಡಿಸಿದೆ. ಸಾರ್ವಜನಿಕರಿಗೆ ರೂ.50 ಪ್ರವೇಶ ಶುಲ್ಕ ನಿಗದಿಪಡಿಸಲಾಗಿದೆ.

ಐಎಂಎ ಅಧ್ಯಕ್ಷ ಶ್ರೀಧರ್ ಕುರಡಗಿ ಮಾತನಾಡಿ, ತಾರಾಲಯ ವೀಕ್ಷಣೆಯಿಂದ ಮಕ್ಕಳಲ್ಲಿ ನಕ್ಷತ್ರಗಳು, ಗ್ರಹಗಳು ಹಾಗೂ ಬ್ರಹ್ಮಾಂಡದ ಬಗ್ಗೆ ಕುತೂಹಲ ಹೆಚ್ಚುತ್ತದೆ. ಇದು ಪ್ರಶ್ನಿಸುವ ಹಾಗೂ ತಾರ್ಕಿಕವಾಗಿ ಯೋಚಿಸುವ ಮನೋಭಾವವನ್ನು ಬೆಳೆಸುತ್ತದೆ. ಮೂಢನಂಬಿಕೆಗಳನ್ನು ದೂರಮಾಡಿ ಪ್ರಕೃತಿ ಘಟನೆಗಳನ್ನು ವೈಜ್ಞಾನಿಕವಾಗಿ ಅರ್ಥಮಾಡಿಕೊಳ್ಳಲು ಸಹಕಾರಿಯಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಡಾ. ಎಸ್.ಆರ್. ನಾಗನೂರ, ಶಿವಕುಮಾರ್ ಕುರಿ, ಎಂ.ಎಚ್. ಕಾಂಬಳೆ, ಆನಂದ ಪೋತ್ನೀಸ್, ವೆರ್ಣೇಕರ್, ಡಾ. ರಶ್ಮಿ, ಎಂ.ಎ. ಯರಗುಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



### ಮಕ್ಕಳಿಗೆ ಮೃಗಾಲಯ ಉಚಿತ ವೀಕ್ಷಣೆ

ಲಾಯನ್ಸ್ ಕ್ಲಬ್ ವತಿಯಿಂದ ಮಕ್ಕಳಿಗಾಗಿ ಎರಡು ಬಸ್‌ಗಳ ವ್ಯವಸ್ಥೆ ಮಾಡಲಾಗಿದ್ದು, ತಾರಾಲಯದಿಂದ ಮೃಗಾಲಯಕ್ಕೆ ತೆರಳಿ ಉಚಿತವಾಗಿ ವೀಕ್ಷಣೆ ಮಾಡುವ ಅವಕಾಶ ಕಲ್ಪಿಸಲಾಗಿದೆ. ನಂತರ ಮಕ್ಕಳು ಮತ್ತೆ ತಾರಾಲಯಕ್ಕೆ ಮರಳುವ ವ್ಯವಸ್ಥೆಯೂ ಇದೆ.

### ಪ್ರದರ್ಶನ ವೇಳಾಪಟ್ಟಿ

ಸೋಮವಾರ ಹಾಗೂ ಮೇ 1 (ಕಾರ್ಮಿಕ ದಿನಾಚರಣೆ) ಹೊರತುಪಡಿಸಿ ಉಳಿದ ದಿನಗಳಲ್ಲಿ ಬೆಳಿಗ್ಗೆ 9:30ರಿಂದ ಸಂಜೆ 4:30ರವರೆಗೆ ಐದು ಪ್ರದರ್ಶನಗಳು ನಡೆಯಲಿವೆ.

1. ಬೆಳಿಗ್ಗೆ 9:30 – 10:45
2. 11:00 – 12:00
3. 12:15 – 1:15
4. 2:15 – 3:15
5. 3:30 – 4:30

# ಸನ್ಮಾರ್ಗ ಕಾಲೇಜಿನಲ್ಲಿ ಅಂಬೇಡ್ಕರ್- ಬಾಬು ಜಗಜೀವನರಾಮ್ ಜಯಂತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸನ್ಮಾರ್ಗ ಪಿಯು ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಮ್ ಅವರ ಜಯಂತಿಯನ್ನು ಶ್ರದ್ಧಾಭಕ್ತಿಯಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಉಡುಪಿ ದೇಶಪಾಂಡೆ ಮಾತನಾಡಿ, ಡಾ. ಅಂಬೇಡ್ಕರ್ ಅವರು ಹಲವು ದೇಶಗಳ ಸಂವಿಧಾನಗಳನ್ನು ಅಧ್ಯಯನ ಮಾಡಿ ಭಾರತದ ಪರಿಸ್ಥಿತಿಗೆ ತಕ್ಕಂತೆ ಅತ್ಯುತ್ತಮ ಸಂವಿಧಾನವನ್ನು ರೂಪಿಸಿದ್ದಾರೆ. ಅವರ ಕೊಡುಗೆ ಅಪಾರವಾಗಿದ್ದು, ಅವರಿಗೆ ಕೋಟಿ ಕೋಟಿ ನಮನಗಳು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಚೇರ್ಮನ್ ಪ್ರೊ. ರಾಜೇಶ ಎಸ್. ಕುಲಕರ್ಣಿ ಮಾತನಾಡಿ, ಡಾ. ಬಾಬು ಜಗಜೀವನರಾಮ್ ಅವರು ಸ್ವಾತಂತ್ರ್ಯ ಹೋರಾಟಗಾರರಾಗಿ, ದಲಿತ ನಾಯಕನಾಗಿ ಹಾಗೂ ಹಸಿರು ಕ್ರಾಂತಿಯ ಹರಿಕಾರರಾಗಿ ದೇಶಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಕೇಂದ್ರ ಸಚಿವರಾಗಿ ವಿವಿಧ ಹುದ್ದೆಗಳಲ್ಲಿ ದೀರ್ಘಕಾಲ ಸೇವೆ ಸಲ್ಲಿಸಿ ಶ್ರೇಷ್ಠ ಸಂಸದೀಯ ಪಟು ಎಂಬ ಖ್ಯಾತಿಗೆ ಪಾತ್ರರಾಗಿದ್ದಾರೆ ಎಂದು ಹೇಳಿದರು.

ಈ ಇಬ್ಬರು ಮಹಾನ್ ನಾಯಕರ ಜಯಂತಿಯನ್ನು ಆಚರಿಸುವುದು ನಮ್ಮೆಲ್ಲರಿಗೂ ಸೌಭಾಗ್ಯ. ವಿದ್ಯಾರ್ಥಿಗಳು ಅವರ ಆದರ್ಶಗಳನ್ನು ಅನುಸರಿಸಿ ದೇಶಕ್ಕೆ ಕೀರ್ತಿ ತರುವವರಾಗಲಿ ಎಂದು ಹಾರೈಸಿದರು.

ಕಾರ್ಯಕ್ರಮದ ಆರಂಭದಲ್ಲಿ ಆಡಳಿತಾಧಿಕಾರಿ ಎಂ.ಸಿ. ಹಿರೇಮಠ ಅವರ ನೇತೃತ್ವದಲ್ಲಿ ಭಾವಚಿತ್ರ ಪೂಜೆ ನೆರವೇರಿತು. ಉಪನ್ಯಾಸಕರು, ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

ನಿರ್ದೇಶಕರುಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್ ಹಾಜರಿದ್ದರು.

# ಬಿಸಿಲಿನಿಂದ ರಕ್ಷಣೆಗಾಗಿ ಮಹಿಳೆಯರಿಗೆ ನೆರವು

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚಿನ ತೀವ್ರ ಬಿಸಿಲು ಸಾಮಾನ್ಯವಲ್ಲ, ಅಪಾಯಕಾರಿಯಾಗಿದೆ. ಆದರೆ ಅದಕ್ಕೆ ಹೆದರಿ ದೈನಂದಿನ ಕಾರ್ಯಗಳನ್ನು ನಿಲ್ಲಿಸದೇ, ಅಗತ್ಯ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಜೀವನ ನಡೆಸಬೇಕು ಎಂದು ಇನ್ನರ್ ವ್ಹೀಲ್ ಡಿಸ್ಟ್ರಿಕ್ಟ್ 317 ಪಿ.ಡಿ.ಸಿ. ಪ್ರೇಮಾ ಗುಳಗೌಡರ ಹೇಳಿದರು.

ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಆಯೋಜಿಸಿದ್ದ ಮಹಿಳಾ ಸಬಲೀಕರಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಹಿಳೆಯರು ಆರ್ಥಿಕ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಮುಂದುವರಿಯುತ್ತಿರುವಂತೆ ತಮ್ಮ ಆರೋಗ್ಯದ ಬಗ್ಗೆ ಕೂಡ ಜಾಗ್ರತೆ ವಹಿಸಬೇಕು. ವಯಸ್ಸಿಗೆ ಅನುಗುಣವಾಗಿ ನಿಯಮಿತ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಅತ್ಯಂತ ಮುಖ್ಯ ಎಂದು ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ವಿವೇಕಾನಂದ ನಗರ ಬಡಾವಣೆಯಲ್ಲಿ ಬೀದಿ ವ್ಯಾಪಾರದಲ್ಲಿ ತೊಡಗಿರುವ ಮಹಿಳೆಯರಾದ ಲಕ್ಷ್ಮಿ ಕೋಣೆಕಲ್, ಸುಮಂಗಲಾ ಪೂಜಾರ, ಲಕ್ಷ್ಮಿ ಬಿಜಾಪುರ ಹಾಗೂ ಸರೋಜಾ ಭಜಂತ್ರಿ ಅವರಿಗೆ ಬಿಸಿಲಿನಿಂದ ರಕ್ಷಣೆಗಾಗಿ ಛತ್ರಿಗಳನ್ನು ವಿತರಿಸಲಾಯಿತು. ಅಲ್ಲದೆ, ಬಟ್ಟೆ ಇಸ್ತ್ರಿ ಮೂಲಕ ಜೀವನ ನಡೆಸುತ್ತಿರುವ ದೀಪಾ ಮಡಿವಾಳರ್ ಅವರಿಗೆ ಇಸ್ತ್ರಿ ಕಲ್ಲು ನೀಡಿ ಅವರ ಉದ್ಯೋಗಕ್ಕೆ ಪ್ರೋತ್ಸಾಹ ನೀಡಲಾಯಿತು. ಅಧ್ಯಕ್ಷೆ ಅಶ್ವಿನಿ ಜಗತಾಪ ಮಾತನಾಡಿ, ಮಹಿಳಾ ಸಬಲೀಕರಣ ಹಾಗೂ ಅವರ ಸುರಕ್ಷತೆಗೆ ಇನ್ನರ್ ವೀಲ್ ಕ್ಲಬ್ ಸದಾ ಬದ್ಧವಾಗಿದೆ ಎಂದು ಹೇಳಿದರು. ಪುಷ್ಪಾ ಭಂಡಾರಿ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಪಾಧ್ಯಕ್ಷೆ ವೀಣಾ ತಿರ್ಲಾಪುರ್, ಸಂಪಾದಕಿ ವೀಣಾ ಕಾವೇರಿ, ಶಿಲ್ಪಾ ಅಕ್ಕಿ, ವಿದ್ಯಾ ಗಂಜಿಹಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ವಿಶ್ವವಿದ್ಯಾಲಯದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ 135ನೇ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕುಲಪತಿ ಪ್ರೊ. ಡಾ. ಸುರೇಶ್ ವಿ. ನಾಡಗೌಡರ ಅವರು, ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಸಮಾನತೆ, ಸಾಮಾಜಿಕ ನ್ಯಾಯ ಹಾಗೂ ಮಾನವ ಹಕ್ಕುಗಳ ಮೌಲ್ಯಗಳನ್ನು ಸ್ಥಾಪಿಸಿದ ಮಹಾನ್ ದಾರ್ಶನಿಕರು. "ಶಿಕ್ಷಣ ಸರ್ವರಿಗೂ ಸಮಬಾಳು-ಸಮ ಪಾಲು" ಎಂಬ ಅವರ ಆಶಯವು ಇಂದಿಗೂ ಸಮಾಜ ನಿರ್ಮಾಣಕ್ಕೆ ಮಾರ್ಗದರ್ಶಕವಾಗಿದೆ ಎಂದು ಅಭಿಪ್ರಾಯಪಟ್ಟರು.

ಅಧೀಕ್ಷಕ ಶಶಿಭೂಷಣ ದೇವೂರ ಮಾತನಾಡಿ, ಡಾಕ್ಟರ್ ಅಂಬೇಡ್ಕರ್ ಅವರ ಜೀವನ ಹಾಗೂ ಸಾಧನೆಗಳು ಶ್ರಮ, ದೃಢನಿಶ್ಚಯ ಮತ್ತು ಶಿಕ್ಷಣದ ಮಹತ್ವವನ್ನು ಪ್ರತಿಪಾದಿಸುತ್ತವೆ. ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಪರಿಕಲ್ಪನೆಗಳನ್ನು ಸಮಾಜದಲ್ಲಿ ಅಳವಡಿಸುವುದು ಪ್ರತಿಯೊಬ್ಬ ನಾಗರಿಕನ ಹೊಣೆಗಾರಿಕೆಯಾಗಿದೆ ಎಂದು ಹೇಳಿದರು. ಎನ್‌ಎಸ್‌ಎಸ್ ಕಾರ್ಯಕ್ರಮ ಸಂಯೋಜಕ ಪ್ರಕಾಶ್ ಮಾಚೇನಹಳ್ಳಿ ಮಾತನಾಡಿ, ಅಂಬೇಡ್ಕರ್ ಅವರ ಚಿಂತನೆಗಳು ಯುವಪೀಳಿಗೆಗೆ ಸಾಮಾಜಿಕ ಜವಾಬ್ದಾರಿ ಹಾಗೂ ಪ್ರಜಾಸತ್ತಾತ್ಮಕ ಮೌಲ್ಯಗಳ ಅರಿವು ಮೂಡಿಸುತ್ತವೆ ಎಂದು ಹೇಳಿದರು.

ಉಪನ್ಯಾಸಕರಾದ ಡಾ. ಸಂತೋಷಕುಮಾರ, ಚಂದ್ರಪ್ಪ ಬಾರಂಗಿ ಹಾಗೂ ಪ್ರವೀಣ್ ಅಂಕಲಕೋಟಿ ಅವರು ಅಂಬೇಡ್ಕರ್ ಅವರ ಸಾಮಾಜಿಕ ಸುಧಾರಣಾ ಚಿಂತನೆಗಳು ಮತ್ತು ಶಿಕ್ಷಣದ ಮಹತ್ವ ಕುರಿತು ವಿಚಾರ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ, ಮೃತ್ಯುಂಜಯ ಮೆಣಸಿನಕಾಯಿ, ವಿಶೇಷಾಧಿಕಾರಿಗಳಾದ ಉಮೇಶ್ ಬಾರಕೇರ, ಎಂ.ಬಿ. ಚನ್ನಪ್ಪಗೌಡರ, ಡಾಕ್ಟರ್ ಗಿರೀಶ್ ದೀಕ್ಷಿತ್, ಡಾಕ್ಟರ್ ಶ್ರೀಧರ ಹಾದಿಮನಿ, ವಿವಿಧ ಅಧಿಕಾರಿಗಳು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಸಂವಿಧಾನದಿಂದ ಬದುಕು ಬದಲಾವಣೆ - ಸಮಾನತೆಗೆ ಹೋರಾಟ ಅಗತ್ಯ

## ಅಂಬೇಡ್ಕರ್-ಜಗಜೀವನ್ ರಾಮ್ ಜಯಂತಿ ಆಚರಣೆಯಲ್ಲಿ ಶಾಸಕ ಕೆ. ನೇಮಿರಾಜ್ ನಾಯ್ಕ



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಅಂಬೇಡ್ಕರ್ ಅವರು ಅನುಭವಿಸಿದ ಅನ್ಯಾಯ, ಅಪಮಾನ ಹಾಗೂ ಶೋಷಣೆಯ ನಡುವೆ ತಮ್ಮ ಅಧ್ಯಯನ ಮತ್ತು ಪರಿಶ್ರಮದಿಂದ ಸಂವಿಧಾನ ರೂಪಿಸಿ ಸಮಾಜದ ಬದುಕಿನಲ್ಲಿ ಮಹತ್ತರ ಬದಲಾವಣೆ ತಂದಿದ್ದಾರೆ. ಆದರೂ ಸಮಾನತೆ ಸಂಪೂರ್ಣವಾಗಿ ಸಾಧಿಸಲು ಇನ್ನೂ ಹೋರಾಟ ಅಗತ್ಯವಾಗಿದೆ ಎಂದು ಶಾಸಕ ಕೆ. ನೇಮಿರಾಜ್ ನಾಯ್ಕ ಹೇಳಿದರು.

ಪಟ್ಟಣದ ರಾಮನಗರದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದ ಬಳಿ ತಾಲೂಕು ಆಡಳಿತ, ಸಮಾಜ ಕಲ್ಯಾಣ ಇಲಾಖೆ ಹಾಗೂ ಪುರಸಭೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಹಾಗೂ ಬಾಬು ಜಗಜೀವನ್ ರಾಮ್ ಅವರ 119ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ಬಾಬು ಜಗಜೀವನ್ ರಾಮ್ ಹಸಿರು ಕ್ರಾಂತಿಯ ಹರಿಕಾರರಾಗಿದ್ದು, ದೀನ-ದಲಿತ ಹಾಗೂ ಹಿಂದುಳಿದ ವರ್ಗಗಳ ಏಳಿಗೆಗಾಗಿ ಹೋರಾಡಿದ ಮಹನೀಯರು ಎಂದು ಹೇಳಿದರು.

ತಾಲೂಕು ದಂಡಾಧಿಕಾರಿ ಕವಿತಾ ಆರ್, ಮಾತನಾಡಿ, ಸಂವಿಧಾನವು ಪ್ರತಿಯೊಬ್ಬರ ಬದುಕಿಗೆ ದಿಕ್ಸೂಚಿಯಾಗಿದ್ದು, ಅದನ್ನು ಸದುಪಯೋಗಪಡಿಸಿಕೊಳ್ಳುವುದು ಎಲ್ಲರ ಕರ್ತವ್ಯ ಎಂದು ಹೇಳಿದರು. ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಪಾಲಯ್ಯ ವಿಶ್ವನಾಥ ಅವರು ಅಂಬೇಡ್ಕರ್ ಹಾಗೂ ಜಗಜೀವನ್ ರಾಮ್ ಅವರ ತತ್ವ-ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ದಲಿತ ಸಂಘರ್ಷ ಸಮಿತಿಯ ತಾಲೂಕು ಅಧ್ಯಕ್ಷ ಗದ್ದಿಕೆರೆ ದೊಡ್ಡ ಬಸಪ್ಪ ಮಾತನಾಡಿ, ಮೀಸಲಾತಿ ಪರಿಕಲ್ಪನೆಯ ಮೂಲಕ ದೀನ-ದಲಿತ ವರ್ಗಗಳಿಗೆ ರಾಜಕೀಯ ಹಾಗೂ ಆಡಳಿತ ಕ್ಷೇತ್ರದಲ್ಲಿ ಅವಕಾಶ ದೊರಕಿದ್ದು, ಇಂತಹ ಮಹನೀಯರನ್ನು ಸದಾ ಸ್ಮರಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದ ವೇಳೆ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಜಗದೀಶ್ ಅವರು ಭಾರತ ಸಂವಿಧಾನದ ಪ್ರಸ್ತಾವನೆಯನ್ನು ಬೋಧಿಸಿದರು. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ 2025-26ನೇ ಸಾಲಿನಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ಬಸವೇಶ್ವರ ಬಜಾರ್ ಮುಖ್ಯ ಬೀದಿಗಳಲ್ಲಿ ಅಂಬೇಡ್ಕರ್ ಹಾಗೂ ಜಗಜೀವನ್ ರಾಮ್ ಅವರ ಭಾವಚಿತ್ರಗಳನ್ನು ಹೊತ್ತ ಬೆಳ್ಳಿ ರಥದಲ್ಲಿ ತಾಳ-ಮದ್ದಲೆ ಹಾಗೂ ವಾದ್ಯಗಳೊಂದಿಗೆ ಭವ್ಯ ಮೆರವಣಿಗೆ ನಡೆಸಲಾಯಿತು. ಸಾಂಸ್ಕೃತಿಕ ಕಾರ್ಯಕ್ರಮಗಳಾಗಿ ಶಾರದಾ ಮತ್ತು ಸೋಮನಾಥ ತಂಡದಿಂದ ಪ್ರಾರ್ಥನೆ ಹಾಗೂ ರೈತ ಗೀತೆಗಳು, ಮಾಂತೇಶ್ ಕಲಾ ತಂಡದಿಂದ ಅಂಬೇಡ್ಕರ್ ಕುರಿತ ಹಾಡುಗಳು ಗಮನಸೆಳೆಯುವಂತಾಗಿದ್ದವು.

ಕಾರ್ಯಕ್ರಮದಲ್ಲಿ ವೃತ್ತ ಪೊಲೀಸ್ ನಿರೀಕ್ಷಕ ವಿಕಾಸ್ ಲಮಾಣಿ, ಜೆಡಿಎಸ್ ಜಿಲ್ಲಾಧ್ಯಕ್ಷ ಬದಾಮಿ ಮೃತ್ಯುಂಜಯ, ಕಾಂಗ್ರೆಸ್ ಮುಖಂಡ ಹೆಗ್ಡಾಳ್ ರಾಮಣ್ಣ, ಆನಂದಳ್ಳಿ ಪ್ರಭಾಕರ, ದಲಿತ ಮುಖಂಡ ಎ. ಮಹೇಶ್, ಪುರಸಭೆ ಸದಸ್ಯ ಗಣೇಶ್, ವಕೀಲ ಸಿ. ಬಸವರಾಜ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ಪ್ರಸ್ತಾವನೆ ಪಠಣದ ವಿಚಾರವಾಗಿ ಕ್ಷಣಿಕ ಗೊಂದಲ ಉಂಟಾದರೂ, ಬಳಿಕ ಅದನ್ನು ಸರಿಪಡಿಸಿ ಕಾರ್ಯಕ್ರಮವನ್ನು ಮುಂದುವರಿಸಲಾಯಿತು.

ತೀವ್ರ ಬಿಸಿಲಿನ ನಡುವೆಯೂ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಜನರಿಗೆ ತಾಲೂಕು ರೆಡ್ಡಿ ಸಂಘದ ಬಸವರಾಜ್ ರೆಡ್ಡಿ ಅವರು ಕುಡಿಯುವ ನೀರಿನ ವ್ಯವಸ್ಥೆ ಮಾಡಿದ್ದು ಗಮನಾರ್ಹವಾಗಿತ್ತು.

# ಸನ್ಮಾರ್ಗ ಕಾಲೇಜಿನ 'ಶೈಕ್ಷಣಿಕ ಚೈತನ್ಯ'ಕ್ಕೆ ಮೆರಗು: ಶಿವರಾಮ ಚೈತನ್ಯಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಸನ್ಮಾರ್ಗ ಕಾಲೇಜಿನ ಶೈಕ್ಷಣಿಕ ಸಾಧನೆಗೆ ಮತ್ತೊಂದು ಮೆರಗು ನೀಡಿದ ಶಿವರಾಮ ಚೈತನ್ಯ ಕುಲಕರ್ಣಿ ಅವರನ್ನು ಅವರ ಸ್ವನಿವಾಸದಲ್ಲಿಯೇ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.

2025-2026ನೇ ಸಾಲಿನ ದ್ವಿತೀಯ ಪಿಯು ವಾರ್ಷಿಕ ಪರೀಕ್ಷೆಯಲ್ಲಿ ವಿಜ್ಞಾನ ವಿಭಾಗದ ವಿದ್ಯಾರ್ಥಿಯಾದ ಶಿವರಾಮ ಚೈತನ್ಯ ಶೇ.97.2% ಅಂಕ ಗಳಿಸಿ ಗಮನ ಸೆಳೆದಿದ್ದಾರೆ. ಗಣಿತದಲ್ಲಿ 100ಕ್ಕೆ 100, ಜೀವಶಾಸ್ತ್ರ ಹಾಗೂ ಭೌತಶಾಸ್ತ್ರದಲ್ಲಿ ತಲಾ 100ಕ್ಕೆ 98 ಅಂಕ ಗಳಿಸಿ ಕಾಲೇಜಿಗೆ ದ್ವಿತೀಯ ಸ್ಥಾನ ತಂದುಕೊಟ್ಟಿದ್ದಾರೆ.

ಈ ಸಾಧನೆಗೆ ಅಭಿನಂದನೆ ಸಲ್ಲಿಸಿದ ಪ್ರಾಚಾರ್ಯ ಪ್ರೊ. ಪುನೀತ್ ದೇಶಪಾಂಡೆ, ವಿದ್ಯಾರ್ಥಿಯ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು.

ಸಂಸ್ಥೆ ಸಾಧ್ಯವಿದ್ದಷ್ಟು ಸಹಾಯ ಮತ್ತು ಸಹಕಾರ ನೀಡಲು ಸದಾ ಸಿದ್ಧವಿದೆ ಎಂದು ಹೇಳಿದರು. ಆಡಳಿತಾಧಿಕಾರಿ ಎಂ.ಸಿ. ಹಿರೇಮಠ ಮಾತನಾಡಿ, ಶಿವರಾಮ ಚೈತನ್ಯ ಸ್ವಭಾವದಲ್ಲಿ ಮೃದುವಾಗಿದ್ದರೂ ಕಠಿಣ ಪರಿಶ್ರಮದಿಂದ ಸಾಧನೆ ಮಾಡಿದಿದ್ದು, ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದ್ದಾರೆ ಎಂದರು.

ಸನ್ಮಾನ ಕಾರ್ಯಕ್ರಮದಲ್ಲಿ ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ಇಮ್ತಿಯಾಜ್ ಅಳವಂಡಿ ಸೇರಿದಂತೆ ಆಡಳಿತ ಮಂಡಳಿ ಸದಸ್ಯರು ಭಾಗವಹಿಸಿದ್ದರು.

ಸಂಸ್ಥೆಯ ಚೇರ್ಮನ್ ಪ್ರೊ. ರಾಜೇಶ ಕುಲಕರ್ಣಿ, ನಿರ್ದೇಶಕರುಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್ ಸೇರಿದಂತೆ ಉಪನ್ಯಾಸಕ ವೃಂದ ಹಾಗೂ ಸಿಬ್ಬಂದಿ, ವಿದ್ಯಾರ್ಥಿಯ ಮುಂದಿನ ಶೈಕ್ಷಣಿಕ ಜೀವನ ಇನ್ನಷ್ಟು ಉನ್ನತ ಮಟ್ಟಕ್ಕೆ ಬೆಳೆಯಲಿ ಎಂದು ಹಾರೈಸಿದರು.



# ಕನ್ನಡ ಪುಸ್ತಕ ಸೊಗಸು ಬಹುಮಾನಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ 2025ನೇ ಸಾಲಿನ (ಜನವರಿ ರಿಂದ ಡಿಸೆಂಬರ್ ಅವಧಿಯಲ್ಲಿ ಪ್ರಕಟವಾದ) ಕನ್ನಡ ಕೃತಿಗಳಿಗೆ “ಕನ್ನಡ ಪುಸ್ತಕ ಸೊಗಸು” ಬಹುಮಾನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪುಸ್ತಕದ ಮುದ್ರಣ, ಮುಖಪುಟ ವಿನ್ಯಾಸ ಹಾಗೂ ಒಟ್ಟಾರೆ ಗುಣಮಟ್ಟವನ್ನು ಪರಿಗಣಿಸಿ ಈ ಬಹುಮಾನಗಳನ್ನು ನೀಡಲಾಗುತ್ತದೆ. ಆಸಕ್ತ ಪ್ರಕಾಶಕರು, ಮುದ್ರಕರು ಹಾಗೂ ಕಲಾವಿದರು ಅರ್ಜಿ ಸಲ್ಲಿಸಬಹುದು. ಅರ್ಜಿಯಲ್ಲಿ ಪುಸ್ತಕದ ಹೆಸರು, ಲೇಖಕರ ಹೆಸರು, ಪ್ರಕಟಣೆಯ ವರ್ಷ, ಪ್ರಕಾಶಕರ ಹೆಸರು, ಮುದ್ರಣಾಲಯದ ಹೆಸರು, ಮುಖಪುಟ ವಿನ್ಯಾಸ ಮಾಡಿದ ಕಲಾವಿದರ ಹೆಸರು, ಅವರ ಪೂರ್ಣ ವಿಳಾಸ ಹಾಗೂ ದೂರವಾಣಿ ಸಂಖ್ಯೆ ಸೇರಿದಂತೆ ಸಂಪೂರ್ಣ ವಿವರಗಳನ್ನು ಸಲ್ಲಿಸಬೇಕು. ಜೊತೆಗೆ ಪುಸ್ತಕದ ಎರಡು ಪ್ರತಿಗಳನ್ನು ಅರ್ಜಿ ನಮೂನೆಯೊಂದಿಗೆ ಕಳುಹಿಸಬೇಕು.

ಅರ್ಜಿಗಳನ್ನು ಮೇ 11ರೊಳಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560002 ವಿಳಾಸಕ್ಕೆ ಕಳುಹಿಸಬೇಕು. ಸಲ್ಲಿಸಲಾದ ಪುಸ್ತಕಗಳನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿಯ ನಮೂನೆಯನ್ನು https://kpp.karnataka.gov.in ವೆಬ್‌ಸೈಟ್‌ನಲ್ಲಿ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – 560002 ಅನ್ನು ಸಂಪರ್ಕಿಸಬಹುದು ಎಂದು ಆಡಳಿತಾಧಿಕಾರಿ ಕೆ.ಬಿ. ಕಿರಣ್ ಸಿಂಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**“ಸಮುದಾಯದ ಪ್ರಗತಿಗೆ ಜನಪ್ರತಿನಿಧಿಗಳು ಹಾಗೂ ಸಂಘಟನೆಗಳು ನಿರಂತರವಾಗಿ ಕಾರ್ಯನಿರ್ವಹಿಸಬೇಕು” – ಡಾ. ಕುಮಾರ್ ಮಹಾರಾಜ ಸ್ವಾಮೀಜಿ**

# ಸಮುದಾಯದ ಅಭಿವೃದ್ಧಿಗೆ ಸಂಘಟನೆಗಳ ಬದ್ಧತೆ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಸೇವಾಲಾಲ್ ಭವನದಲ್ಲಿ ರಾಜ್ಯ ಬಂಜಾರ ಲಂಬಾಣಿ ನಿರಾಶ್ರಿತರ ಸಂಘದ ತಾಲೂಕು ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಜರುಗಿತು.

ಸಮಾರಂಭದಲ್ಲಿ ಕೋಗಳಿ ತಾಂಡಾದ ಡಾ. ಕುಮಾರ್ ಮಹರಾಜ ಸ್ವಾಮೀಜಿ ಮಾತನಾಡಿ, ಬಂಜಾರ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ಜನಪ್ರತಿನಿಧಿಗಳು ಹಾಗೂ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ನಿರಂತರವಾಗಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಚಿತ್ರದುರ್ಗ ಜಿಲ್ಲಾಧ್ಯಕ್ಷ ಶ್ರೀಧರನಾಯ್ಕ ಮಾತನಾಡಿ, ಕೇವಲ ಪ್ರತಿಷ್ಠೆಗಾಗಿ ಸಂಘಟನೆಗಳನ್ನು ನಿರ್ಮಿಸುವುದರಿಂದ ಪ್ರಯೋಜನವಿಲ್ಲ. ಸಮಾಜದ ಅಭಿವೃದ್ಧಿಗೆ ನಿಜವಾದ ಬದ್ಧತೆ ಅಗತ್ಯವಿದೆ ಎಂದು ಹೇಳಿದರು.

ಸಂಘದ ಜಿಲ್ಲಾಧ್ಯಕ್ಷ ಕೆ. ರವಿನಾಯ್ಕ ಮಾತನಾಡಿ, ಸಮುದಾಯದ ಏಳಿಗೆಗಾಗಿ ಸಂಘದ ಕಾರ್ಯಕರ್ತರು ಸಂಘಟಿತವಾಗಿ ಕೆಲಸ ಮಾಡಬೇಕು ಎಂದು ತಿಳಿಸಿದರು.

ದೂಪದಹಳ್ಳಿ ತಾಂಡಾದ ಶಿವಪ್ರಕಾಶ್ ಮಹಾರಾಜ ಸ್ವಾಮೀಜಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ತಾಲೂಕು ಪದಾಧಿಕಾರಿಗಳು ಪ್ರತಿಜ್ಞಾವಿಧಿ ಸ್ವೀಕರಿಸಿದರು.

**ಪದಾಧಿಕಾರಿಗಳು**

ಎಲ್.ಪಿ. ಶಿವಕುಮಾರ ಚೌವ್ಹಾಣ್ (ತಾಲೂಕಾಧ್ಯಕ್ಷ), ಮಂಜುನಾಯ್ಕ (ಉಪಾಧ್ಯಕ್ಷ), ಅಶೋಕನಾಯ್ಕ (ಪ್ರಧಾನ ಕಾರ್ಯದರ್ಶಿ), ಎಲ್.ಎಸ್. ವೆಂಕಟೇಶ ನಾಯ್ಕ (ಸಹ ಕಾರ್ಯದರ್ಶಿ) ಪದವಿ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಮೈಲಾರಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜುನಾಯ್ಕ, ಸಂಘಟನಾ ಕಾರ್ಯದರ್ಶಿ ಡಿ. ತೇಜಾನಾಯ್ಕ, ಹೂವಿನಹಡಗಲಿ ತಾಲೂಕಾಧ್ಯಕ್ಷ ಶೇಖರನಾಯ್ಕ, ಕೂಡ್ಲಿಗಿ ಅಧ್ಯಕ್ಷ ಧನಂಜಯ, ಹರಪನಹಳ್ಳಿ ಅಧ್ಯಕ್ಷ ಡಿ. ಕೊಟ್ರೇಶ್ ನಾಯ್ಕ ಸೇರಿದಂತೆ ಹಲವರು ಭಾಗವಹಿಸಿದ್ದರು.

## ದಂಬಾಂಗ್ ವಿರುದ್ಧ ಫ್ಲೈಯಿಂಗ್ ಪಾಲ್ಕನ್ಸ್‌ಗೆ 16 ರನ್ ಜಯ

▶▶ಮೊದಲನೇ ಪುಟದಿಂದ

ಗುರಿ ಬೆನ್ನಟ್ಟಿದ ದಂಬಾಂಗ್ ತಂಡ 10 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 73 ರನ್ ಗಳಿಸಿ ಸೋಲು ಕಂಡಿತು. ಸುಲೇಮಾನ್ 36 ರನ್ ಹಾಗೂ ಪ್ರದೀಪ 20 ರನ್ ಗಳಿಸಿದರು. ಫ್ಲೈಯಿಂಗ್ ಪಾಲ್ಕನ್ಸ್ ಪರ ಶಂಕರ್ 2 ಓವರ್‌ಗಳಲ್ಲಿ 10 ರನ್ ನೀಡಿ 3 ವಿಕೆಟ್ ಪಡೆದು ಪಂದ್ಯ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು. ಚಿನ್ನು ಮತ್ತು ಸತೀಶಕುಮಾರ ತಲಾ ಒಂದು ವಿಕೆಟ್ ಪಡೆದರು.

## ಮನೆಗೆ ದೀಪ, ಮನಕ್ಕೆ ಜ್ಞಾನವೇ ಬೆಳಕು

▶▶ಮೊದಲನೇ ಪುಟದಿಂದ



ಹಿಂದೆ ಸಂಸ್ಕೃತ ಆಡಳಿತ ಭಾಷೆಯಾಗಿದ್ದ ಕಾರಣ ವಾಲ್ಮೀಕಿ ಹಾಗೂ ಬುದ್ಧರಂತಹ ಮಹಾನ್ ವ್ಯಕ್ತಿಗಳು ಬೆಳಕಿಗೆ ಬಂದರು. ಈಗ ಪರಿಸ್ಥಿತಿ ಬದಲಾಗಿದ್ದು, ಮನಸ್ಥಿತಿಯೂ ಬದಲಾಗಬೇಕು. ಈ ನಿಟ್ಟಿನಲ್ಲಿ ಮನೆಗೊಂದು ಗ್ರಂಥಾಲಯ ಅವಶ್ಯಕ ಎಂದು ಡಾ. ಮಾನಸ ಪುನರುಚ್ಚರಿಸಿದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಮಾತನಾಡಿ, ನಾವು ಮನೆಯಲ್ಲಿ ದೇವರಿಗಾಗಿ ಪ್ರತ್ಯೇಕವಾಗಿ ಹೇಗೆ ದೇವರ ಕೋಣೆಯನ್ನು ಮೀಸಲಿಡುತ್ತೇವೆಯೋ, ಹಾಗೆಯೇ ಮನೆಯಲ್ಲಿ ಐದೋ ಹತ್ತೋ ಪುಸ್ತಕಗಳನ್ನಿಟ್ಟುಕೊಂಡು ಒಂದು ಪುಟ್ಟ ಗ್ರಂಥಾಲಯ ಮಾಡಿಕೊಳ್ಳಬೇಕು. ಅದು ನಮ್ಮ ಪಾಲಿನ ಜ್ಞಾನದ ದೇವಾಲಯವಾಗಲಿದೆ ಎಂದು ಆಶಯ ವ್ಯಕ್ತಪಡಿಸಿದರು.

ಸಂಚಾಲಕ ಸಂತೋಷ ಅಂಗಡಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿಲ್ಲಾ ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷ ಡಾ. ರವಿ ಗುಂಜೀಕರ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಡಾ. ಮಾನಸ, ಡಾ. ರವಿ ಗುಂಜೀಕರ ಹಾಗೂ ಜಿಲ್ಲಾ ಜಾಗೃತಿ ಸಮಿತಿಯ ಸಂಚಾಲಕರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಚಾಲಕ ಎ.ಎಸ್. ಮಕಾಂದಾರ, ಜಾನಪದ ಸಾಹಿತ್ಯ ಪರಿಷತ್ ಸದಸ್ಯ ಶಂಕ್ರಣ್ಣ ಸಂಕಣ್ಣವರ, ಕೆ.ಎಫ್. ಹಳ್ಯಾಳ, ಎಚ್.ಎಂ. ಶರೀಫನವರ, ಅಶೋಕ ಬರಗುಂಡಿ, ಮುತ್ತು ಬಳಿಯಲಿ, ನಿವೃತ್ತ ಶಿಕ್ಷಕ ಕೆ.ಎಫ್. ಬಳ್ಳಾರಿ, ಜಿ.ಪಂ. ಮಾಜಿ ಕೋಶಾಧ್ಯಕ್ಷ ಆರ್.ಎಂ. ನಿಂಬನಾಯ್ಕರ್, ವಾರ್ತಾ ಇಲಾಖೆ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ವಿಭೂತಿ, ಪೋತಬಾಳ, ನೌಕರರ ಸಂಘದ ಪದಾಧಿಕಾರಿಗಳಾದ ಎಂ.ಎಂ. ನಿಟ್ಟಾಲಿ, ಸಿದ್ದಪ್ಪ ಲಿಂಗದಾಳ, ಲಕ್ಷ್ಮಣರೆಡ್ಡಿ ಮುದಗಣ್ಣವರ, ರಾಜು ಕಂತಿಗೊಣ್ಣವರ, ರಾಜಕುಮಾರ ಸೊಪಡ್ಲ ಸೇರಿದಂತೆ ಅನೇಕ ಸಾಹಿತ್ಯಾಭಿಮಾನಿಗಳು ಉಪಸ್ಥಿತರಿದ್ದರು.

## ಕ್ರಾಂತಿ ಸೂರ್ಯ ಜೈ ಭೀಮ ಸೇನೆಯಿಂದ ಅಂಬೇಡ್ಕರ್ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗದಗ

ಕ್ರಾಂತಿ ಸೂರ್ಯ ಜೈ ಭೀಮ ಸೇನೆ ಗದಗ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತ್ಯುತ್ಸವ ಅಂಗವಾಗಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ್ ಅವರು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿದರು. ಜೊತೆಗೆ ಮಹಾ ಅನ್ನಸಂತರ್ಪಣೆ ಕಾರ್ಯಕ್ರಮವನ್ನು ಉದ್ಘಾಟಿಸಿ, ಡಾ. ಬಿ.ಆರ್. ಅಂಬೇಡ್ಕರ್ ಅವರ ತತ್ವ ಮತ್ತು ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿ ಉತ್ತಮ ವ್ಯಕ್ತಿಗಳಾಗಿ ಬೆಳೆಯಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಯುವ ಕಾಂಗ್ರೆಸ್ ಉಪಾಧ್ಯಕ್ಷ ಅಹಮ್ಮದ್ ಹುಸೇನ್ ಖಾಜಿ, ಕ್ರಾಂತಿ ಸೂರ್ಯ ಜೈ ಭೀಮ ಸೇನೆ ಜಿಲ್ಲಾಧ್ಯಕ್ಷ ಶಿವಾನಂದ ಸಕ್ರಿ ಸೇರಿದಂತೆ ಸಮಾಜದ ಮುಖಂಡರು, ಸಂಘದ ಕಾರ್ಯಕರ್ತರು ಹಾಗೂ ಮಹಿಳೆಯರು ಮತ್ತು ಯುವಕರು ಉಪಸ್ಥಿತರಿದ್ದರು.

**ರೈತರ ಒಗ್ಗಟ್ಟಿಗೆ ಮರಬ್ಬಿಹಾಳ ತಾಂಡದಲ್ಲಿ ಸಂಘಟನೆಗೆ ಚಾಲನೆ**

# ರಾಜ್ಯ ರೈತ ಸಂಘ ಗ್ರಾಮ ಘಟಕ ಉದ್ಘಾಟನೆ – ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ಹಗರಿಬೊಮ್ಮನಹಳ್ಳಿ ತಾಲೂಕಿನ ಮರಬ್ಬಿಹಾಳ ತಾಂಡದಲ್ಲಿ ಗ್ರಾಮ ಘಟಕವನ್ನು ಉದ್ಘಾಟಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯ ರೈತ ಸಂಘದ ರಾಜ್ಯ ಕಾರ್ಯಧ್ಯಕ್ಷ ಜೆ.ಎಂ. ವೀರಸಂಗಯ್ಯ ಹಾಗೂ ರಾಜ್ಯ ಸಂಘಟನಾ ಕಾರ್ಯದರ್ಶಿ ಬಿ. ಗೋಣಿಬಸಪ್ಪ ಉಪಸ್ಥಿತರಿದ್ದು, ಗ್ರಾಮ ಮಟ್ಟದಲ್ಲಿ ರೈತರ ಹಿತಾಸಕ್ತಿಗಾಗಿ ಸಂಘಟನೆಗಳನ್ನು ಬಲಪಡಿಸುವ ಅಗತ್ಯವನ್ನು ವಿವರಿಸಿದರು. ರೈತರು ಒಗ್ಗಟ್ಟಿನಿಂದ ತಮ್ಮ ಹಕ್ಕುಗಳಿಗಾಗಿ ಸಂಘಟಿತವಾಗಿ ಕೆಲಸ ಮಾಡುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಹಗರಿಬೊಮ್ಮನಹಳ್ಳಿ ತಾಲೂಕು ಅಧ್ಯಕ್ಷ ಬಸವನಗೌಡ, ತಾಲೂಕು ಪ್ರಧಾನ ಕಾರ್ಯದರ್ಶಿ ಎ. ನಾಗರಾಜ್, ವಿಜಯನಗರ ಜಿಲ್ಲಾ ಯುವ ಘಟಕದ ಜಿಲ್ಲಾಧ್ಯಕ್ಷ ರವಿಕುಮಾರ್ ತಂಬ್ರಹಳ್ಳಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಗ್ರಾಮ ಘಟಕದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದ್ದು, ಗೌರವಾಧ್ಯಕ್ಷರಾಗಿ ಪರಶುರಾಮ್ ನಾಯಕ್, ಅಧ್ಯಕ್ಷರಾಗಿ ಸೇವಾ ನಾಯಕ್, ಕಾರ್ಯಾಧ್ಯಕ್ಷರಾಗಿ ಚಂದ್ರ ನಾಯಕ್, ಪ್ರಧಾನ ಕಾರ್ಯದರ್ಶಿಯಾಗಿ ಯಂಕಾ ನಾಯ್ಕ, ಸಂಘಟನಾ ಕಾರ್ಯದರ್ಶಿಯಾಗಿ ಪ್ರಕಾಶ್ ನಾಯಕ, ಖಜಾಂಚಿಯಾಗಿ ರಾಮ ನಾಯ್ಕ ಆಯ್ಕೆಯಾಗಿದ್ದಾರೆ.

ಉಪಾಧ್ಯಕ್ಷರಾಗಿ ಪೂಜಾರಿ ಚಂದ್ರನಾಯಕ್, ಷಣ್ಮುಖ ನಾಯ್ಕ, ಯಮುನಾ ನಾಯ್ಕ, ಶಂಕರ್ ನಾಯ್ಕ ಆಯ್ಕೆಯಾಗಿದ್ದು, ಕಾರ್ಯದರ್ಶಿಯಾಗಿ ರಮೇಶ್ ನಾಯ್ಕ ಹಾಗೂ ಸಹ ಕಾರ್ಯದರ್ಶಿಗಳಾಗಿ ಟೀಕೆ ನಾಯ್ಕ, ಸೂರ್ಯನಾಯ್ಕ, ರಣಧೀರ ನಾಯಕ, ಜಗ್ಗು ನಾಯಕ ನೇಮಕಗೊಂಡಿದ್ದಾರೆ. ಇದಲ್ಲದೆ ಸಂಚಾಲಕರಾಗಿ ಶಂಕರ್ ನಾಯ್ಕ, ಮೂರ್ತಿ ನಾಯ್ಕ, ಯಂಕಾನಾಯ್ಕ, ಸಣ್ಣ ರಾಮ ನಾಯಕ, ಅರ್ಜುನ್ ನಾಯಕ, ಮುನ್ನಿ ನಾಯಕ, ಅನಿಲ್ ಕುಮಾರ್ ಹಾಗೂ ಸೋಮ್ಲಿ ನಾಯ್ಕ ಅವರನ್ನು ಆಯ್ಕೆ ಮಾಡಲಾಗಿದೆ.

ಗ್ರಾಮ ಮಟ್ಟದಲ್ಲಿ ರೈತ ಸಂಘಟನೆಗೆ ಬಲ ತುಂಬುವ ಉದ್ದೇಶದಿಂದ ಈ ಘಟಕವನ್ನು ಸ್ಥಾಪಿಸಲಾಗಿದ್ದು, ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದು ಮುಖಂಡರು ತಿಳಿಸಿದರು.

## ನೇಮಕಾತಿ ಹೋರಾಟಗಾರ ವಿದ್ಯಾರ್ಥಿಗಳ ಬಂಧನ ಖಂಡನೀಯ: ಎಸ್.ವಿ. ಸಂಕನೂರ

▶▶ಮೊದಲನೇ ಪುಟದಿಂದ

ನೇಮಕಾತಿ ಪ್ರಕ್ರಿಯೆ ಆರಂಭಿಸುವುದಾಗಿ ಭರವಸೆ ನೀಡಿದ್ದರು. ಆದರೆ ಅದನ್ನು ಪಾಲಿಸದ ಕಾರಣ ಯುವಕರು ಮತ್ತೆ ಹೋರಾಟಕ್ಕೆ ಮುಂದಾಗಿದ್ದಾರೆ ಎಂದು ಅವರು ಹೇಳಿದರು.

ಹೋರಾಟಗಾರರನ್ನು ಬಂಧಿಸಿರುವುದು ಅವರ ಮೂಲಭೂತ ಹಕ್ಕುಗಳ ಉಲ್ಲಂಘನೆ ಎಂದು ಆಕ್ಷೇಪ ವ್ಯಕ್ತಪಡಿಸಿದ ಅವರು, ನಾಲ್ವರು ವಿದ್ಯಾರ್ಥಿಗಳನ್ನು ಬಂಧಿಸಿ ನಂತರ ಬಿಡುಗಡೆ ಮಾಡಿದ್ದಾರೆ. ವಿದ್ಯಾರ್ಥಿಗಳಿಂದ ಒಂದು ಲಕ್ಷ ಜಾಮೀನು ನೀಡಲು ಹಾಗೂ ಒಂದು ವರ್ಷದ ವರೆಗೆ ಹೋರಾಟದಿಂದ ದೂರವಿರಬೇಕೆಂಬ ಷರತ್ತು ವಿಧಿಸಿರುವುದು ಸರಿಯಲ್ಲ ಎಂದು ಹೇಳಿದರು.

ಬಂಧಿತರಾದ ಕುರುವತ್ತಪ್ಪ ದೊಡ್ಮನಿ, ಸುನಿಲ್ ಗೋಲಾ, ಚಾಣಕ್ಯ ಬಿ. ಮತ್ತು ಗುರುದೇವ್ ಎಸ್. ಬಳಂಡಗಿ ಅವರ ಮೇಲಿನ ನೋಟಿಸ್ ಹಿಂಪಡೆಯಬೇಕು ಎಂದು ಅವರು ಆಗ್ರಹಿಸಿದರು.

## ಸಂಭ್ರಮದ ಬಸವರಾಜೇಂದ್ರ ಶ್ರೀಗಳ ರಥೋತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿನ ಅಲ್ಲಮಪ್ರಭುದೇವರ ಮಠದ ಲಿಂಗೈಕ್ಯ ಬಸವರಾಜೇಂದ್ರ ಮಹಾಸ್ವಾಮಿಗಳ ಮಹಾ ರಥೋತ್ಸವ ಮಂಗಳವಾರ ಸಂಜೆ ಭಕ್ತಿಭಾವ ಹಾಗೂ ಸಂಭ್ರಮದ ವಾತಾವರಣದಲ್ಲಿ ಜರುಗಿತು.

ಅಲ್ಲಮಪ್ರಭುದೇವರ ಮಠದಿಂದ ಚೌಕಿಮಠದವರೆಗೆ ಸಾಗಿದ ರಥೋತ್ಸವಕ್ಕೆ ಹೊಸರಿತ್ತಿಯ ಗುದ್ದಲೀಶ್ವರ ಶ್ರೀಗಳು ಹಾಗೂ ಶ್ರೀಮಠದ ಸಿದ್ಧಲಿಂಗೇಶ್ವರ ಶ್ರೀಗಳು ವಿಧಿ ವಿಧಾನಗಳೊಂದಿಗೆ ಪೂಜೆ ಸಲ್ಲಿಸಿ ಚಾಲನೆ ನೀಡಿದರು.

ಜಾಂಜ ಮೇಳ, ಡೊಳ್ಳು ಕುಣಿತ ಸೇರಿದಂತೆ ವಿವಿಧ ಜಾನಪದ ವಾದ್ಯಮೇಳಗಳು ರಥೋತ್ಸವಕ್ಕೆ ರಂಗು ತುಂಬಿದವು. ಭಕ್ತರು ಉತ್ತತ್ತಿ ಎಸೆದು ತಮ್ಮ ಭಕ್ತಿಯನ್ನು ಅರ್ಪಿಸಿದರು. “ಹರ ಹರ ಮಹಾದೇವ, ಬಸವರಾಜೇಂದ್ರ ಮಹಾರಾಜ ಕೀ ಜೈ” ಎಂಬ ಘೋಷಣೆಗಳೊಂದಿಗೆ ಭಕ್ತರು ತೇರನ್ನು ಎಳೆದು ಭಕ್ತಿ ಸಮರ್ಪಿಸಿದರು.

**“ಉತ್ತಮ ಪೌರಕಾರ್ಮಿಕ” ಪ್ರಶಸ್ತಿ ವಿತರಣೆ**

# ಪೌರಕಾರ್ಮಿಕರಿಗೆ ಗೌರವ




■ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಹಸಿರು ಕ್ರಾಂತಿ ಹರಿಕಾರ, ಮಾಜಿ ಉಪ ಪ್ರಧಾನಮಂತ್ರಿ ಡಾ. ಬಾಬು ಜಗಜೀವನ್ ರಾಮ್ ಅವರ ಜಯಂತಿ ಅಂಗವಾಗಿ ನಗರದ ಅಂಬೇಡ್ಕರ್ ಭವನದಲ್ಲಿ ಭಾವಪೂರ್ಣ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ವಿವಿಧ ನಗರಸಭೆ ಹಾಗೂ ಪುರಸಭೆಗಳಲ್ಲಿನ ಪೌರಕಾರ್ಮಿಕರ ಸೇವೆಯನ್ನು ಗುರುತಿಸಿ “ಉತ್ತಮ ಪೌರಕಾರ್ಮಿಕ” ಪ್ರಶಸ್ತಿಯನ್ನು ಗಣ್ಯರು ಪ್ರಧಾನ ಮಾಡಿ ಗೌರವಿಸಿದರು. ಸಮಾಜದ ಸ್ವಚ್ಛತೆ ಹಾಗೂ ಸಾರ್ವಜನಿಕ ಆರೋಗ್ಯ ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ಅತ್ಯಂತ ಮಹತ್ತರವಾಗಿದ್ದು, ಅವರ ಸೇವೆ ಅಮೂಲ್ಯವಾಗಿದೆ ಎಂದು ಗಣ್ಯರು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಗಣ್ಯರು, ಸಾರ್ವಜನಿಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

**ಪ್ರಶಸ್ತಿ ಪಡೆದ ಪೌರಕಾರ್ಮಿಕರು**

*)ಮುದಕಪ್ಪ ಬಚ್ಚೇನಹಳ್ಳಿ – ಪುರಸಭೆ ಮುಂಡರಗಿ
*)ಮರಿಯಪ್ಪ ಬಾನಪ್ಪ ಗುಡಿಮನಿ – ಪಟ್ಟಣ ಪಂಚಾಯತ್ ಶಿರಹಟ್ಟಿ
*)ದುರುಗಪ್ಪ ಪಾದಗಟ್ಟಿ – ಪಟ್ಟಣ ಪಂಚಾಯತ್ ನರೇಗಲ್ಲ
*)ಬಸವರಾಜ ಎಸ್. ಜೋಗಣ್ಣವರ್ – ಪುರಸಭೆ ರೋಣ
*)ಮಹೇಶ್ ಎಂ. ಚಲವಾದಿ – ಪುರಸಭೆ ನರಗುಂದ
*)ದಾವಲಪ್ಪ ತಾಯಿ ದ್ಯಾಮವ್ವ ನಡೆಗೇರಿ – ಪಂಚಾಯತ್ ಮುಳಗುಂದ
*)ರೇಣಪ್ಪ ಕಮತದ – ಪುರಸಭೆ ಲಕ್ಷ್ಮೇಶ್ವರ
*)ಶಿವಪ್ಪ ಮಾದರ – ಪುರಸಭೆ ಗಜೇಂದ್ರಗಡ
*)ಅಶೋಕ್ ಚಲವಾದಿ – ಗದಗ–ಬೆಟಗೇರಿ ನಗರಸಭೆ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka